


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 245 | ₹ ಬೆಲೆ: 4 | Wednesday, 22, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಬರ ಪರಿಸ್ಥಿತಿಯ ಬಗ್ಗೆ ವರದಿ ನೀಡಿ ತಿಂಗಳಾಗಿದ್ದರೂ ಮೋದಿ ಸರ್ಕಾರ ನಯಾಪೈಸೆ ಕೊಟ್ಟಿಲ್ಲ: ಸಿಎಂ ಸಿದ್ದರಾಮಯ್ಯ

ವಿಜಯಪುರ: ಬರ ಪರಿಸ್ಥಿತಿಯ ಬಗ್ಗೆ ರಾಜ್ಯ ಸರ್ಕಾರ ಕೇಂದ್ರಕ್ಕೆ ವರದಿ ನೀಡಿ ಒಂದು ತಿಂಗಳಾಗಿದೆ. ಕೇಂದ್ರ ಸರ್ಕಾರದ ಬರ ಅಧ್ಯಯನ ಕೇಂದ್ರ ಬಂದು ಹೋಗಿ ಒಂದು ತಿಂಗಳ ಮೇಲಾಗಿದ್ದರೂ ಇಂದಿನವರೆಗೆ ಒಂದು ಪೈಸೆಯನ್ನೂ ಕೊಟ್ಟಿಲ್ಲ.



ಎನ್.ಡಿ.ಆರ್‌ಎಫ್ ಮಾರ್ಗಸೂಚಿಯಲ್ಲಿ ಮಾರ್ಪಾಡು ತರಲು ಬರೆದಿರುವ ಪತ್ರಕ್ಕೂ ಕೇಂದ್ರದಿಂದ ಉತ್ತರ ಬಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಕಿಡಿಕಾರಿದರು.

ಡಿಸಿಸಿ ಬ್ಯಾಂಕ್ ಆವರಣದಲ್ಲಿ ಸೋಮವಾರ ನಡೆದ 70ನೇ ಸಹಕಾರಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸುವ ಮುನ್ನ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿ ವಿರುದ್ಧ ಕಿಡಿಕಾರಿದರು.

ಬರಗಾಲ ಬಂದಾಗ 150 ದಿನಗಳ ಕೆಲಸ ನೀಡುವುದು ಕಡ್ಡಾಯ. ಇದಕ್ಕೆ ಕೇಂದ್ರ ಸರ್ಕಾರ ಅನುಮತಿ ಕೊಡಬೇಕು. ಅನುಮತಿ ಕೋರಿ ನಾವು ಪತ್ರ ಬರೆದಿದ್ದು ಇಂದಿನವರೆಗೂ ಉತ್ತರ ಬಂದಿಲ್ಲ ಎಂದು ಹೇಳಿದರು.

ಬರ ಪರಿಸ್ಥಿತಿಯ ಬಗ್ಗೆ ರಾಜ್ಯ ಸರ್ಕಾರ ಕೇಂದ್ರಕ್ಕೆ ವರದಿ ನೀಡಿ ಒಂದು ತಿಂಗಳಾಗಿದೆ. ಕೇಂದ್ರ ಸರ್ಕಾರದ ಬರ ಅಧ್ಯಯನ ಕೇಂದ್ರ ಬಂದು ಹೋಗಿ ಒಂದು ತಿಂಗಳ ಮೇಲಾಗಿದ್ದರೂ ಇಂದಿನವರೆಗೆ ಒಂದು ಪೈಸೆಯನ್ನೂ ಕೊಟ್ಟಿಲ್ಲ. ಎನ್.ಡಿ.ಆರ್‌ಎಫ್ ಮಾರ್ಗಸೂಚಿಯಲ್ಲಿ ಮಾರ್ಪಾಡು ತರಲು ಬರೆದಿರುವ ಪತ್ರಕ್ಕೂ ಕೇಂದ್ರದಿಂದ ಉತ್ತರವಿಲ್ಲ ಎಂದು ತಿಳಿಸಿದರು.

ಬಳಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬರ ಪರಿಹಾರ ಕಾಮಗಾರಿ ಕೈಗೆತ್ತಿಕೊಳ್ಳಲು ರಾಜ್ಯದ ಜಿಲ್ಲಾಧಿಕಾರಿಗಳ ಖಾತೆಗೆ ಸರ್ಕಾರ 800 ಕೋಟಿ ರೂ ನೀಡಲಾಗಿದೆ. "ರೈತರಿಗೆ ಪರಿಹಾರ ನೀಡಲು ಸರಕಾರ ಎಲ್ಲ ರೀತಿಯ ಪ್ರಯತ್ನ ಮಾಡುತ್ತಿದೆ. ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಡಿಸಿ ಮತ್ತು ಜಿಪಂ ಸಿಇಒಗಳಿಗೂ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆ.

ಅವರಿಗೆ MGNREGA ಅಡಿಯಲ್ಲಿ ಉದ್ಯೋಗಗಳನ್ನು ಒದಗಿಸಬೇಕು. ಜೊತೆಗೆ ರೈತರು ಮೇವಿನ ಕೊರತೆ ಎದುರಿಸುತ್ತಿದ್ದಾರೆ. ಈ ಮೂರು ಸಮಸ್ಯೆಗಳನ್ನು ಪರಿಹರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಈ ಸಂದರ್ಭ ಉಪಸ್ಥಿತರಿದ್ದ ವಿಜಯಪುರ ಹಾಗೂ ಬಾಗಲಕೋಟ ಬಿಜೆಪಿ ಸಂಸದರಾದ ರಮೇಶ ಜಿಗಜಿಣಗಿ, ಪಿ.ಸಿ.ಗದ್ದಿಗೌಡರ ಅವರು ಬರ ಪರಿಹಾರ ಕಾಮಗಾರಿಗೆ ಹಣ ಮಂಜೂರು ಮಾಡಲು ಕೇಂದ್ರದ ಗಮನಕ್ಕೆ ತರುವಂತೆ ಮನವಿ ಮಾಡಿದರು.

## ಗಾಜಾದ ಇಂಡೋನೇಷ್ಯಾ ಆಸ್ಪತ್ರೆ ಮೇಲೆ ಇಸ್ರೇಲ್ ದಾಳಿ: 12 ಮಂದಿ ದುರ್ಮರಣ

ಗಾಜಾ ಪಟ್ಟಿ: ಉತ್ತರ ಗಾಜಾದಲ್ಲಿರುವ ಇಂಡೋನೇಷ್ಯಾ ಆಸ್ಪತ್ರೆಯ ಮೇಲೆ ಇಸ್ರೇಲ್ ಸೇನೆ ದಾಳಿ ಮಾಡಿದ ಪರಿಣಾಮ 12 ಮಂದಿ ಸಾವಿಗೀಡಾಗಿದ್ದಾರೆ ಎಂದು ಹಮಾಸ್‌ನ ಆರೋಗ್ಯ ಸಚಿವಾಲಯ ತಿಳಿಸಿದೆ.



ಗಾಜಾದ ಶಿಫಾ ಆಸ್ಪತ್ರೆಯ ಅಡಿಯಲ್ಲಿ ಹಮಾಸ್ ಬಂಡುಕೋರರ ಸುರಂಗ ಪತ್ತೆ: ಇಸ್ರೇಲ್ ಗಾಯಗೊಂಡಿದ್ದ ರೋಗಿಗಳು ಅವರ ಸಂಬಂಧಿಕರು ಸೇರಿದಂತೆ 12 ಮಂದಿ ಸಾವಿಗೀಡಾಗಿದ್ದಾರೆ.

ಹಲವು ಮಂದಿ ಗಾಯಗೊಂಡಿದ್ದಾರೆ. ಮೃದೇಹಗಳನ್ನು ಹೊರತೆಗೆಯಲು ಸಾಧ್ಯವಾಗುತ್ತಿಲ್ಲ. ಇಂಡೋನೇಷ್ಯಾ ಆಸ್ಪತ್ರೆ ಹಾಗೂ ಇತರ ಕಟ್ಟಡಗಳ ಮೇಲೆ ಇಸ್ರೇಲ್ ಸೇನೆಯು ಸ್ನೈಪರ್ ದಾಳಿ ಮಾಡಿದೆ ಸಚಿವಾಲಯ ತಿಳಿಸಿದೆ.

ದಾಳಿಯ ಬಳಿಕ ರೆಡ್‌ಕ್ರಾಸ್ ಸಹಾಯದಿಂದ 100ಕ್ಕೂ ಅಧಿಕ ರೋಗಿಗಳನ್ನು ಸ್ಥಳಾಂತರಿಸಲಾಗಿದೆ. ಇನ್ನು 100 ಮಂದಿಯನ್ನು ಖಾನ್ ಯೂನಿಸ್‌ಗೆ ಸ್ಥಳಾಂತರಿಸಲಾಗಿದೆ ಎಂದು ಆರೋಗ್ಯ ಇಲಾಖೆಯ ವಕ್ತಾರ ಅಶ್ರಫ್ ಅಲ್–ಖುದ್ರಾ ತಿಳಿಸಿದ್ದಾರೆ. ಯುದ್ಧಪೀಡಿತ ಗಾಜಾದಲ್ಲಿ 24 ಲಕ್ಷ ಮಂದಿ ಸಂಕಷ್ಟಕ್ಕೆ ಸಿಲುಕಿದ್ದು, ಸಾವಿರಾರು ಮಂದಿ ಗಾಯಗೊಂಡಿದ್ದಾರೆ. ವಿದೇಶಿ ಪ್ರಜೆಗಳು ಮತ್ತು ಎರಡು ಪಾಸ್‌ಪೋರ್ಟ್ ಹೊಂದಿದವರಿಗೆ ಮಾತ್ರ ಹೊರಗೆ ಹೋಗಲು ಅನುಮತಿ ನೀಡಲಾಗಿದೆ.

ಇನ್ನು ಸೋಮವಾರ ಅಲ್–ಶಿಫಾ ಆಸ್ಪತ್ರೆಯಿಂದ ಅವಧಿಪೂರ್ವಕವಾಗಿ ಜನಿಸಿದ 28 ಶಿಶುಗಳನ್ನು ಅಲ್–ರಫಾ ಗಡಿ ಮೂಲಕ ಈಜಿಪ್ಟ್‌ಗೆ ಸ್ಥಳಾಂತರಿಸಲಾಗಿದೆ. ಎಲ್ಲಾ ಶಿಶುಗಳು ಗಂಭೀರವಾದ ಸೋಂಕಿನಿಂದ ಬಳಲುತ್ತಿವೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ.

## ವಿಜಯೇಂದ್ರ ಮಗು, ಆತನಿಗೆ ಇನ್ನೂ ಏನೂ ಗೊತ್ತಿಲ್ಲ: ಸಚಿವ ಚಲುವರಾಯಸ್ವಾಮಿ



ಮಂಡ್ಯ: ವಿಜಯೇಂದ್ರ ಪಾಪ ಇನ್ನೂ ಮಗು. ಆತನಿಗೆ ಇನ್ನೂ ಏನೂ ಗೊತ್ತಿಲ್ಲ ಎನ್ನುವ ಮೂಲಕ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ಮಾಡಿದ್ದ ನೂತನ ಬಿಜೆಪಿ ರಾಜ್ಯಾಧ್ಯಕ್ಷರಿಗೆ ತಮ್ಮ ಮಾತಿನ ಮೂಲಕ ಸಚಿವ ಚಲುವರಾಯಸ್ವಾಮಿ ಕಾಲೆಳೆದಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿಯ ಹಲಗೂರಿನಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ಸೌಂಡ್ ಜಾಸ್ತಿ ಆಗಿದೆ ಎಂದು ವಿಜಯೇಂದ್ರ ಸೌಂಡ್ ಜಾಸ್ತಿ ಮಾಡುತ್ತಿದ್ದಾರೆ. ಪಾಪ ವಿಜಯೇಂದ್ರಗೆ ಏನು ಗೊತ್ತು ಆತ ಇನ್ನೂ ಮಗು. ಅವರ ತಂದೆ ಸಿಎಂ ಆದಾಗ ತಂದೆ ಜೊತೆಯಲ್ಲಿ ತೊಡಗಿಸಿಕೊಂಡಿದ್ದರಿಂದ ರಾಜ್ಯದ ವಿಚಾರ ತಿಳಿದಿದ್ದೇನೆ ಅಂದರೆ ಏನೂ ಮಾಡಲು ಆಗಲ್ಲ ಎಂದರು. ಪಕ್ಷದ ಅಧ್ಯಕ್ಷನಾಗಿ ಯಾವ ಪದ ಬಳಕೆ ಮಾಡಬೇಕು ಎಂದು ಅವರಿಗೆ ಗೊತ್ತಿಲ್ಲ. ಇವರಿಗೆ ಉತ್ತರ ಕೊಡಲು ನಮಗೆ ಗೊತ್ತಿಲ್ಲ ಅಂತಾ ಅಲ್ಲ. ಅವರಿಗಿಂತ ಹೆಚ್ಚಾಗಿ ಮಾತನಾಡುತ್ತೇವೆ. ನಾವು ಹಳ್ಳಿಯಿಂದಲೇ ಬಂದಿರೋದು. ನಮಗೂ ಭಾಷೆ ಗೊತ್ತಿದೆ. ಯಾವ ಭಾಷೆ ಬಳಸಬೇಕು ಅಂತಾನೂ ಗೊತ್ತಿದೆ. ನಮ್ಮ ನಾಲಿಗೆ ಹಿಡಿತದಲ್ಲಿ ಇರಬೇಕು ಅಂತಾ ಸುಮ್ಮನಿದ್ದೇವೆ ಅಷ್ಟೇ ಎಂದು ಕಿಡಿಕಾರಿದರು. ವಿಜಯೇಂದ್ರಗೆ ಪಕ್ಷದಲ್ಲಿ ತುಂಬಾ ವ್ಯತ್ಯಾಸ ಇದೆ. ಅವರನ್ನು ಯಾರೂ ಅಧ್ಯಕ್ಷರನ್ನಾಗಿ ಒಪ್ಪಲು ತಯಾರಿಲ್ಲ. ಈಗ ಅಶೋಕ್ ಮನೆ ಮನೆಗೆ ಹೋಗಿ ಸಮಾಧಾನ ಮಾಡುತ್ತೇವೆ ಎಂದಿದ್ದಾರೆ. ಇಲ್ಲಿಯೇ ಅವರ ಪಕ್ಷ ಅವರನ್ನು ಎಷ್ಟು ಒಪ್ಪಿಕೊಂಡಿದ್ದಾರೆ ಎಂದು ಗೊತ್ತಾಗುತ್ತದೆ ಎಂದು ಹೇಳಿದರು.

## ಸರ್ವೇಯರ್‌ಗಳ ಕೊರತೆಯಿಂದ ರಾಜ್ಯದ ದೇವಾಲಯಗಳ ಸಮೀಕ್ಷೆ ಕಾರ್ಯ ವಿಳಂಬ

ಬೆಂಗಳೂರು: ಕಂದಾಯ ಇಲಾಖೆಯಲ್ಲಿ ಸರ್ವೇಯರ್‌ಗಳ ಕೊರತೆಯಿಂದಾಗಿ ದೇವಸ್ಥಾನದ ಜಮೀನು ಮತ್ತು ಆಸ್ತಿಗಳ ಸರ್ವೆ ಮಾಡುವ ರಾಜ್ಯ ಸರ್ಕಾರದ ಕಾರ್ಯಕ್ಕೆ ಹೊಡೆತ ಬಿದ್ದಿದೆ.

ಧಾರ್ಮಿಕ ಸ್ಥಳಗಳಿಗೆ ಸೇರಿದ ಪ್ರಮುಖ ಆಸ್ತಿಗಳು ಈಗಾಗಲೇ ಅತಿಕ್ರಮಿಸಲ್ಪಟ್ಟಿವೆ, ಆಸ್ತಿಗಳ ಸರ್ವೆ ಕಾರ್ಯ ವಿಳಂಬ ಅವರಿಗೆ ಮತ್ತಷ್ಟು ಅನುಕೂಲ ಮಾಡಿಕೊಡಬಹುದಾಗಿದೆ.



ಕರ್ನಾಟಕವು 34,000 ದತ್ತಿ ದೇವಾಲಯಗಳನ್ನು ಹೊಂದಿದೆ. ಅವರಲ್ಲಿ 175 ಎ ವರ್ಗದವಾಗಿದ್ದು, ವಾರ್ಷಿಕ ಆದಾಯ 25 ಲಕ್ಷ ರೂ. 5 ಲಕ್ಷದಿಂದ 25 ಲಕ್ಷದವರೆಗಿನ ಆದಾಯದೊಂದಿಗೆ 158 ವರ್ಗ ಃ, ಮತ್ತು ಉಳಿದ ವರ್ಗ ಅ 5 ಲಕ್ಷಕ್ಕಿಂತ ಕಡಿಮೆ ವಾರ್ಷಿಕ ಆದಾಯ ಹೊಂದಿರುವ ದೇವಾಸ್ಥಾನಗಳಿವೆ.

ದೇವಾಲಯದ ಆಸ್ತಿಗಳು, ವಿಶೇಷವಾಗಿ ಪ್ರಮುಖ ಪ್ರದೇಶಗಳಲ್ಲಿ, ಖಾಸಗಿ ವ್ಯಕ್ತಿಗಳು ಮತ್ತು ಸರ್ಕಾರಿ ಸಂಸ್ಥೆಗಳಿಂದ ಅತಿಕ್ರಮಣ ಮಾಡಲಾಗಿದೆ ಎಂದು ದತ್ತಿ ಇಲಾಖೆ ಮೂಲಗಳು ತಿಳಿಸಿವೆ. ಇದಕ್ಕೆ ಸರಿಯಾದ ಸರ್ವೆ ಮತ್ತು ಭೂ ದಾಖಲೆಗಳ ಕೊರತೆಯಿಂದಾಗಿ ಕೋಟ್ಯಂತರ ರೂಪಾಯಿ ಮೌಲ್ಯದ ಜಮೀನುಗಳು ಅತಿಕ್ರಮಣದಾರರ ಪಾಲಾಗಿವೆ. ನಾವು ಆ ಆಸ್ತಿಗಳಿಂದ ಉತ್ತಮ ಆದಾಯವನ್ನು ಗಳಿಸಬಹುದಿತ್ತು, ಆದರೆ ಖಾಸಗಿ ಜನರು ಅವುಗಳ ಮೇಲೆ ಅಧಿಕಾರ ಸ್ಥಾಪಿಸಿದ್ದಾರೆ, ಅವುಗಳನ್ನು ವಾಪಸ್ ಪಡೆಯಲು, ನಮಗೆ ದಾಖಲೆಗಳು ಬೇಕಾಗುತ್ತವೆ ಎಂದು ಹೇಳಿದ್ದಾರೆ.

ಅವುಗಳನ್ನು ವಾಪಸ್ ಪಡೆಯಲು ನಾವು ನ್ಯಾಯಾಲಯದ ಮೆಟ್ಟಿಲೇರಬಹುದು, ಆದರೆ ಸರ್ವೆಯಿಂದ ಉತ್ತಮ ಫಲಿತಾಂಶ ದೊರೆಯಲಿದೆ ಎಂದು ಅಧಿಕಾರಿಯೊಬ್ಬರು ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಗೆ ತಿಳಿಸಿದ್ದಾರೆ.

ಕಂದಾಯ ಇಲಾಖೆಯಲ್ಲಿ ಕಾಯಂ ಸಿಬ್ಬಂದಿ, ಪರವಾನಗಿ ಭೂಮಾಪಕರು ಸೇರಿದಂತೆ 4,700ಕ್ಕೂ ಒಟ್ಟು ಭೂಮಾಪಕರು ಇದ್ದಾರೆ. ಸಮೀಕ್ಷೆಗೆ ಸಂಬಂಧಿಸಿದ ಲಕ್ಷಗಟ್ಟಲೆ ಅರ್ಜಿಗಳು ಇಲಾಖೆಯ ಮುಂದೆ ಬಾಕಿ ಇವೆ. ಬಾಕಿ ಉಳಿದಿರುವ ಅರ್ಜಿಗಳ ಪಟ್ಟಿ ಬೆಳೆಯುತ್ತಲೇ ಇದ್ದರೂ, ಬಾಕಿ ಅರ್ಜಿ ತೆರವುಗೊಳಿಸಲು ವರ್ಷಗಳೇ ತೆಗೆದುಕೊಳ್ಳಬಹುದು.

340 ಭೂಮಾಪಕರನ್ನು ನೇಮಿಸಿಕೊಳ್ಳಲಾಗುವುದು ಮತ್ತು 2,000 ಪರವಾನಗಿ ಭೂಮಾಪಕರನ್ನು ಮುಂದಿನ ಮೂರು ತಿಂಗಳಲ್ಲಿ ಕ್ಷೇತ್ರಕ್ಕೆ ನಿಯೋಜಿಸಲಾಗುವುದು ಎಂದು ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅವರು ದೇವಾಲಯದ ಸಮೀಕ್ಷೆಯ ಭಾಗವಾಗುತ್ತಾರೆ, ಆದರೆ ಅವರು ಆರರಿಂದ ಎಂಟು ತಿಂಗಳ ನಂತರ ಮಾತ್ರ ಕೆಲಸವನ್ನು ಪ್ರಾರಂಭಿಸಬಹುದು ಎಂದು ತಿಳಿಸಿದ್ದಾರೆ.

ದೇವಸ್ಥಾನದ ಆಸ್ತಿಗಳ ಸಮೀಕ್ಷೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ದತ್ತಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಸರ್ವೇಯರ್‌ಗಳ ಕೊರತೆ ಇದೆ. ದತ್ತಿ ಇಲಾಖೆಗೆ ಸೇರಿದ ಆಸ್ತಿಗಳನ್ನು ನಾವು ರಕ್ಷಿಸುತ್ತೇವೆ ಎಂದು ಅವರು ಹೇಳಿದರು. ಹಿಂದಿನ ಬಿಜೆಪಿ ಸರಕಾರವೂ ಕಾಮಗಾರಿ ಆರಂಭಿಸಿದ್ದರೂ ಸಂಪೂರ್ಣವಾಗಿ ಕೈಗೆತ್ತಿಕೊಳ್ಳಲು ಸಾಧ್ಯವಾಗಿರಲಿಲ್ಲ. ಕೆಲವು ಜಿಲ್ಲೆಗಳಲ್ಲಿ ಗಡಿ ಗುರುತು ಮಾಡಿದ್ದರೂ ನಂತರ ಏನೂ ಆಗಲಿಲ್ಲ ಎಂದು ಹೇಳಿದ್ದಾರೆ.

## ತ್ರಿಶಾ ಕುರಿತು ಅಸಭ್ಯ ಹೇಳಿಕೆ; ಯಾವುದೇ ಕಾರಣಕ್ಕೂ ಕ್ಷಮೆ ಕೇಳಲ್ಲ: ಮನ್ಸೂರ್



ಚೆನ್ನೈ: ನಟಿ ತ್ರಿಶಾ ಕುರಿತು ಅಸಭ್ಯವಾಗಿ ಹೇಳಿಕೆ ನೀಡಿರುವ ಕಾಲಿವುಡ್ ನಟ ಮನ್ಸೂರ್ ಅಲಿ ಖಾನ್ ಅವರ ಮೇಲೆ ನಾಡಿಗರ್ ಸಂಗಮ್ (ದಕ್ಷಿಣ ಭಾರತೀಯ ಕಲಾವಿದರ ಸಂಘ) ತಾತ್ಕಾಲಿಕವಾಗಿ ನಿಷೇಧ ಹೇರಿದೆ. ಮನ್ಸೂರ್ ಹೇಳಿದ್ದೇನು?: "ಲಿಯೋ ಸಿನಿಮಾದಲ್ಲಿ ನಾನು ತ್ರಿಷಾ ಜೊತೆ ನಟಿಸುತ್ತಿದ್ದೇನೆ ಎಂದು ಕೇಳಿದಾಗ, ಸಿನಿಮಾದಲ್ಲಿ ಅವರೊಂದಿಗೆ ಬೆಡ್ ರೂಮ್ ಸೀನ್ ಇರುತ್ತದೆ ಅನ್ಕೊಂಡಿದ್ದೆ. ಅವಳನ್ನು ಎತ್ತಿಕೊಂಡು ಬೆಡ್ ರೂಮ್ ಗೆ ಹೋಗುವ ದೃಶ್ಯವಿದೆ ಅಂದುಕೊಂಡಿದ್ದೆ. ಈ ರೀತಿ ನಾನು ಈ ಹಿಂದಿನ ಸಿನಿಮಾದಲ್ಲಿ ಅನೇಕ ನಟಿಯರೊಂದಿಗೆ ಮಾಡಿದ್ದೇನೆ. ನಾನು ತುಂಬಾ ರೇಪ್ ಸೀನ್ ಗಳನ್ನು ಮಾಡಿದ್ದೇನೆ. ಇದೇನು ನನಗೆ ಹೊಸತಲ್ಲ. ಆದರೆ ಇವರು(ಚಿತ್ರತಂಡ) ನನಗೆ ಕಾಶ್ಮೀರದಲ್ಲಿ ಚಿತ್ರೀಕರಣವಾಗುವ ವೇಳೆ ಸೆಟ್ ನಲ್ಲಿ ತ್ರಿಶಾಳನ್ನು ತೋರಿಸಲೇ ಇಲ್ಲ" ಎಂದಿದ್ದರು. ಈ ಹೇಳಿಕೆಗೆ ಹಿರಿಯ – ಕಿರಿಯ ಕಲಾವಿದರು ಆಕ್ರೋಶ ವ್ಯಕ್ತಪಡಿಸಿದ್ದರು. ಇದೀಗ ಅವರ ಹೇಳಿಕೆಯಿಂದಾಗಿ ಅವರನ್ನು ಸಿನಿಮಾದಿಂದ ತಾತ್ಕಾಲಿಕವಾಗಿ ನಾಡಿಗರ್ ಸಂಗಮ್ (ದಕ್ಷಿಣ ಭಾರತೀಯ ಕಲಾವಿದರ ಸಂಘ) ನಿಷೇಧಿಸಿದೆ. "ನನ್ನ ಮೇಲೆ ನಿಷೇಧ ಹೇರಿ ನಾಡಿಗರ್ ಸಂಗಮ್ ತಪ್ಪು ಮಾಡಿದೆ. ಈ ರೀತಿಯ ಸಮಸ್ಯೆ ಸಂಭವಿಸಿದಾಗ, ಅವರು ನನ್ನ ವಿವರಣೆಯನ್ನು ಸಹ ಕೇಳಲಿಲ್ಲ. ಅವರು ನನಗೆ ಕರೆ ಮಾಡಬಹುದಿತ್ತು ಅಥವಾ ವಿವರಣೆ ಕೇಳಲು ನೋಟಿಸ್ ನೀಡಬಹುದಿತ್ತು. ವಿಚಾರಣೆ ಮಾಡಬೇಕಿತ್ತು ಆದರೆ ಹಾಗೆ ಮಾಡದೆ, ಈ ರೀತಿ ನೇರವಾಗಿ ತಾತ್ಕಾಲಿಕವಾಗಿ ನಿಷೇಧ ಹೇರಿದ್ದಾರೆ" ಎಂದಿದ್ದಾರೆ.

## ಮಕ್ಕಳ ಆತ್ಮಹತ್ಯೆಗೆ ಪಾಲಕರ ಒತ್ತಡವೇ ಕಾರಣ: ಸುಪ್ರೀಂ ಕೋರ್ಟ್



ನವದೆಹಲಿ: ತೀವ್ರವಾದ ಪೈಪೋಟಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧರಾಗುವ ತಮ್ಮ ಮಕ್ಕಳ ಮೇಲೆ ಪಾಲಕರು ಹೇರುವ ಒತ್ತಡವೇ ದೇಶದಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆ ಹೆಚ್ಚಲು ಪ್ರಮುಖ ಕಾರಣಗಳು ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದೆ.

ಕೋಚಿಂಗ್ ಕೇಂದ್ರಗಳ ನಿಯಂತ್ರಣಕ್ಕಾಗಿ ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವಂತೆ ಕೋರಿ ಸಲ್ಲಿಸಲಾದ ಅರ್ಜಿ ವಿಚಾರಣೆ ವೇಳೆ ನ್ಯಾಯಾಲಯ ಈ ಮಾತು ಹೇಳಿದೆ.

'ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಳ್ಳುವುದಕ್ಕೆ ಪಾಲಕರ ಒತ್ತಡವೇ ಪ್ರಮುಖ ಕಾರಣ. ಇಂತಹ ಸನ್ನಿವೇಶದಲ್ಲಿ ನ್ಯಾಯಾಲಯ ನಿರ್ದೇಶನ ನೀಡುವುದಾದರೂ ಹೇಗೆ' ಎಂದು ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಹಾಗೂ ಎಸ್.ವಿ.ಎನ್.ಭಟ್ಟಿ ಅವರಿದ್ದ ನ್ಯಾಯಪೀಠವು ಅರ್ಜಿದಾರರ ಪರ ವಕೀಲರನ್ನು ಪ್ರಶ್ನಿಸಿತು.

ಮುಂಬೈ ಮೂಲದ ವೈದ್ಯ ಅನಿರುದ್ಧ ನಾರಾಯಣ ಮಾಲ್ಪಾನಿ ಅವರು ವಕೀಲೆ ಮೋಹಿನಿ ಪ್ರಿಯಾ ಅವರ ಮೂಲಕ ಈ ಕುರಿತು ಅರ್ಜಿ ಸಲ್ಲಿಸಿದ್ದಾರೆ. 'ದೇಶದಲ್ಲಿ ಕೋಚಿಂಗ್ ಕೇಂದ್ರಗಳೇ ಇರಬಾರದು ಎಂಬುದು ನಮ್ಮಲ್ಲಿನ ಬಹುತೇಕರ ಬಯಕೆ. ಆದರೆ, ಶಾಲೆಗಳ ಸ್ಥಿತಿ ನೋಡಿ ಹೇಗಿದೆ. ಇನ್ನೊಂದೆಡೆ ತೀವ್ರವಾದ ಸ್ಪರ್ಧೆ ಇದೆ. ಈ ಎಲ್ಲ ಕಾರಣಗಳಿಂದಾಗಿ ಕೋಚಿಂಗ್ ಕೇಂದ್ರಗಳ ಕದ ತಟ್ಟುವುದನ್ನು ಬಿಟ್ಟರೆ ವಿದ್ಯಾರ್ಥಿಗಳ ಮುಂದೆ ಬೇರೆ ಆಯ್ಕೆ ಇಲ್ಲ' ಎಂದು ನ್ಯಾಯಮೂರ್ತಿ ಖನ್ನಾ ಹೇಳಿದರು.

'ದೇಶದಲ್ಲಿ ಸಂಭವಿಸಿದ ವಿದ್ಯಾರ್ಥಿಗಳ ಸಾವುಗಳ ಪೈಕಿ ಶೇ 8.2ರಷ್ಟು ಮಂದಿ ಆತ್ಮಹತ್ಯೆ ಮಾಡಿಕೊಂಡಿರುವುದನ್ನು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯುರೊದ (ಎನ್‌ಸಿಆರ್‌ಬಿ) 2020ರ ದತ್ತಾಂಶಗಳು ಹೇಳುತ್ತವೆ' ಎಂದು ವಕೀಲೆ ಮೋಹಿನಿಪ್ರಿಯಾ ಅವರು ನ್ಯಾಯಪೀಠಕ್ಕೆ ತಿಳಿಸಿದರು.

## ಸಚಿವ ಸತೀಶ್ ಜಾರಕಿಹೊಳಿ ಸಿಎಂ ಆಗುವುದು ನೂರಕ್ಕೆ ನೂರರಷ್ಟು ಸತ್ಯ: ಶಾಸಕ ವಿಶ್ವಾಸ್ ವೈದ್ಯ



ಬೆಳಗಾವಿ: ಸಚಿವ ಸತೀಶ್ ಜಾರಕಿಹೊಳಿ ಸಿಎಂ ಆಗುವುದು ನೂರಕ್ಕೆ ನೂರರಷ್ಟು ಸತ್ಯ ಎಂದು ಕಾಂಗ್ರೆಸ್ ಶಾಸಕ ವಿಶ್ವಾಸ್ ವೈದ್ಯ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.

ಜಿಲ್ಲೆಯ ಯರಗಟ್ಟಿಯಲ್ಲಿ ನಡೆದ ಕನ್ನಡದ ಜಾತ್ರೆ ಕಾರ್ಯಕ್ರಮದಲ್ಲಿ ಈ ಕುರಿತು ಮಾತನಾಡಿರುವ ಕಾಂಗ್ರೆಸ್ ಶಾಸಕ ವಿಶ್ವಾಸ್ ವೈದ್ಯ, ಸತೀಶ್ ಜಾರಕಿಹೊಳಿ ಪ್ರಭಾವಿ ನಾಯಕರಾಗಿ ಹೊರ ಹೊಮ್ಮುತ್ತಿದ್ದಾರೆ.

ಸತೀಶ್ ಜಾರಕಿಹೊಳಿಯನ್ನು ಸಿಎಂ ಆಗಿ ನೋಡಬೇಕೆಂದು ಹೇಳುತ್ತಿದ್ದಾರೆ. ಮುಂದಿನ ದಿನದಲ್ಲಿ ಬೆಳಗಾವಿ ಗಡಿ ಭಾಗದಿಂದ ಒಬ್ಬ ಸಿಎಂ ಆಗುತ್ತಾರೆ ಎಂದಿದ್ದಾರೆ.

ಪೂರ್ವ ದಿಕ್ಕಿನಲ್ಲಿ ಸೂರ್ಯ ಹುಟ್ಟುವುದು ಎಷ್ಟೋ ಸತ್ಯವೋ, ಸತೀಶ್ ಜಾರಕಿಹೊಳಿ ಅಣ್ಣ ಸಿಎಂ ಆಗುವುದು ಕೂಡ ಅಷ್ಟೇ ಸತ್ಯ ಎಂದು ಶಾಸಕ ವಿಶ್ವಾಸ್ ವೈದ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ವಿದ್ಯುತ್ ತಂತಿ ತುಳಿದು ತಾಯಿ-ಮಗು ಸಾವು: ಪ್ರಕರಣದ ತನಿಖೆಗೆ ನಾಲ್ಕು ತಂಡ ರಚಿಸಲಾಗಿದೆ; ಕೆಜೆ ಜಾರ್ಜ್

ಬೆಂಗಳೂರು: ನಗರದ ಹೊರವಲಯದದಲ್ಲಿರುವ ವೈಟ್‌ಫೀಲ್ಡ್‌ನಲ್ಲಿ ವಿದ್ಯುತ್ ತಂತಿ ತುಳಿದು ಮಹಿಳೆ ಮತ್ತು ಆಕೆಯ ಒಂಬತ್ತು ತಿಂಗಳ ಮಗು ಸಾವಿಗೀಡಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ತನಿಖೆಗಾಗಿ ನಾಲ್ಕು ತಂಡಗಳನ್ನು ರಚಿಸಲಾಗಿದೆ ಎಂದು ಇಂಧನ ಸಚಿವ ಕೆಜೆ ಜಾರ್ಜ್ ಮಂಗಳವಾರ ತಿಳಿಸಿದ್ದಾರೆ.



ಆಘಾತಕಾರಿ ಘಟನೆಯಲ್ಲಿ, ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು 23 ವರ್ಷದ ಮಹಿಳೆ ಮತ್ತು ಆಕೆ ಎತ್ತುಕೊಂಡಿದ್ದ ಮಗು ಭಾನುವಾರ ಮುಂಜಾನೆ ಸಜೀವ ದಹನವಾಗಿದ್ದರು.

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ (ಬೆಸ್ಕಾಂ) ಒಂದು ತಂಡ, ಪೊಲೀಸರ ಇನ್ನೊಂದು ತಂಡ, ರಾಜ್ಯ ವಿದ್ಯುತ್ ಇಲಾಖೆಯಿಂದ ಮೂರನೇ ತಂಡ ಮತ್ತು ಸ್ವತಂತ್ರ ಸಂಸ್ಥೆಯಾಗಿರುವ ನಾಲ್ಕನೇ ತಂಡ ಸಾವಿನ ತನಿಖೆ ನಡೆಸಲಿದೆ ಎಂದು ಜಾರ್ಜ್ ಹೇಳಿದರು.

'ನಾವು ನಾಲ್ಕು ತಂಡಗಳಿಂದ ವಿಚಾರಣೆ ನಡೆಸುತ್ತಿದ್ದೇವೆ ಮತ್ತು ಘಟನೆಗೆ ಸಂಬಂಧಿಸಿದವರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಮತ್ತು ಮುಂದಿನ ಕ್ರಮವನ್ನು ಕೈಗೊಳ್ಳುತ್ತೇವೆ' ಎಂದು ಅವರು ಹೇಳಿದರು.

ಅಂತಹ ಕೇಬಲ್‌ಗಳಿಗೆ ಪ್ರತ್ಯೇಕವಾಗಿ ಡಕ್ಟ್‌ಗಳನ್ನು ಹೊಂದಿರುವ ರಸ್ತೆಗಳಲ್ಲಿ ಯಾವುದೇ ತೂಗಾಡುವ ತಂತಿಗಳು ಇರದಂತೆ ನೋಡಿಕೊಳ್ಳುವುದಾಗಿ ಸಚಿವರು ಭರವಸೆ ನೀಡಿದರು.

15 ದಿನಗಳಲ್ಲಿ ಟೆಲಿಕಾಂ ಕಂಪನಿಗಳು ತಮ್ಮ ಓವರ್‌ಹೆಡ್ ವೈರ್‌ಗಳನ್ನು ಡಕ್ಟ್‌ಗಳಿಗೆ ಸ್ಥಳಾಂತರಿಸಬೇಕಾಗುತ್ತದೆ. ವಿಫಲವಾದರೆ ವಿದ್ಯುತ್ ಇಲಾಖೆ ಅವುಗಳನ್ನು ತೆಗೆದುಹಾಕುತ್ತದೆ.

ಘಟನೆಗೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳು ಸೇರಿದಂತೆ ಬೆಸ್ಕಾಂನ ಐವರು ನೌಕರರನ್ನು ಅಮಾನತುಗೊಳಿಸಲಾಗಿದೆ ಎಂದು ಸಚಿವರು ತಿಳಿಸಿದರು.

## ಚೀನಾಗೆ ಒಂದು ಇಂಚು ಜಾಗವನ್ನೂ ಬಿಟ್ಟುಕೊಡುವುದಿಲ್ಲ: ಫಿಲಿಪ್ಪೀನ್ಸ್ ಅಧ್ಯಕ್ಷ ಮಾರ್ಕೋಸ್

ಫಿಲಿಪೈನ್ಸ್ : ಚೀನಾದ ವಿಸ್ತರಣಾ ನೀತಿಯು ದಕ್ಷಿಣ ಚೀನಾ ಸಮುದ್ರದ ಪರಿಸ್ಥಿತಿಯನ್ನು ಹೆಚ್ಚು ಗಂಭೀರಗೊಳಿಸುತ್ತಿದೆ. ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಜೂನಿಯರ್ ಅವರು ಪರಿಸ್ಥಿತಿ ಹೆಚ್ಚು ಗಂಭೀರವಾಗಿದೆ ಏಕೆಂದರೆ ಅನೇಕ ದೇಶಗಳು ಸ್ಪರ್ಧಾತ್ಮಕ ಪ್ರಾದೇಶಿಕ ಹಕ್ಕುಗಳನ್ನು ಹೊಂದಿರುವ ಪ್ರದೇಶದಲ್ಲಿ ಚೀನಾ ತನ್ನ ಉಪಸ್ಥಿತಿಯನ್ನು ಹೆಚ್ಚಿಸುತ್ತಿದೆ ಎಂದು ಹೇಳಿದ್ದಾರೆ.



ಫಿಲಿಪೈನ್ಸ್ ಕರಾವಳಿಗೆ ಹತ್ತಿರವಿರುವ ಅಟೋಲ್ಗಳು ಮತ್ತು ಶೋಲ್ ಕರಾವಳಿಗಳಲ್ಲಿ ಚೀನಾ ತನ್ನ ಆಸಕ್ತಿಯನ್ನು ಸ್ಥಿರವಾಗಿ ಹೆಚ್ಚಿಸಿದೆ, ಆದರೆ ನಾವು ಅದಕ್ಕೆ ಒಂದು ಇಂಚು ಜಾಗವನ್ನು ಸಹ ನೀಡುವುದಿಲ್ಲ.

ಈ ಕಾರಣದಿಂದಾಗಿ, ಇಲ್ಲಿನ ಪರಿಸ್ಥಿತಿ ಸುಧಾರಿಸುವ ಬದಲು ಹದಗೆಡುತ್ತಿದೆ ಎಂದು ಮಾರ್ಕೋಸ್ ಹೇಳಿದರು. "ದುರದೃಷ್ಟವಶಾತ್, ಪರಿಸ್ಥಿತಿ ಮೊದಲಿಗಿಂತ ಹೆಚ್ಚು ಗಂಭೀರವಾಗಿರುವುದರಿಂದ ಪರಿಸ್ಥಿತಿ ಸುಧಾರಿಸುತ್ತಿದೆ ಎಂದು ನಾನು ವರದಿ ಮಾಡಲು ಸಾಧ್ಯವಿಲ್ಲ. ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ನಡೆದ ಪ್ರಾದೇಶಿಕ ಶೃಂಗಸಭೆಯಿಂದ ಹಿಂದಿರುಗುವಾಗ ಯುಎಸ್ ಮಿಲಿಟರಿ ನಾಯಕರು ಮತ್ತು ಸ್ಥಳೀಯ ಫಿಲಿಪಿನೋ ಸಮುದಾಯವನ್ನು ಭೇಟಿಯಾಗಲು ಫಿಲಿಪ್ಪೀನ್ಸ್ ಅಧ್ಯಕ್ಷರು ಹವಾಯಿಯಲ್ಲಿ ತಂಗಿದರು.

ಈ ಭೇಟಿಯು ಮಾರ್ಕೋಸ್ ಜೂನಿಯರ್ ಗೆ ಭೌಗೋಳಿಕ ರಾಜಕೀಯ ಮತ್ತು ವೈಯಕ್ತಿಕ ಮಹತ್ವವನ್ನು ಪಡೆದುಕೊಂಡಿದೆ.

ಯುಎಸ್ ಮತ್ತು ಫಿಲಿಪೈನ್ಸ್ ತಮ್ಮ ದೀರ್ಘಕಾಲದ ಮೈತ್ರಿಯನ್ನು ಬಲಪಡಿಸುತ್ತಿರುವ ಸಮಯದಲ್ಲಿ ಅವರ ಭೇಟಿ ಬಂದಿದೆ. ಯುಎನ್ ಕನ್ವೆನ್ಷನ್ ಆನ್ ದಿ ಲಾ ಆಫ್ ದಿ ಸೀ ಅಡಿಯಲ್ಲಿ ಚೀನಾದ ವ್ಯಾಪಕ ಐತಿಹಾಸಿಕ ಹಕ್ಕುಗಳನ್ನು ಅಮಾನ್ಯಗೊಳಿಸಿದರೂ, ಬೀಜಿಂಗ್ ಮಧ್ಯಸ್ಥಿಕೆಯನ್ನು ಸಂಪೂರ್ಣವಾಗಿ ಸ್ವೀಕರಿಸಲು ನಿರಾಕರಿಸಿದೆ. ತನ್ನ ದೇಶವು ತಲೆಬಾಗುವುದಿಲ್ಲ ಎಂದು ಮಾರ್ಕೋಸ್ ಹೇಳಿದರು.

## ಇಂದು ಅಂಗನವಾಡಿ ಕಾರ್ಯಕರ್ತೆಯರಿಂದ ಬೆಂಗಳೂರು ಚಲೋ ಕರೆ



ಬೆಂಗಳೂರು: ಸರ್ಕಾರದ ವಿರುದ್ಧ ಅಂಗನವಾಡಿ ಕಾರ್ಯಕರ್ತೆಯರು ಹೊಸ ಸಮರ ಸಾರಿದ್ದಾರೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೆಂಗಳೂರು ಚಲೋ ನಡೆಸಲು ಮುಂದಾಗಿದ್ದಾರೆ.

ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ & ಸಹಾಯಕಿಯರ ಸ್ವತಂತ್ರ ಸಂಘಟನೆಯಿಂದ ಇಂದು ಬೆಳಗ್ಗೆ 10 ಗಂಟೆಯಿಂದ ಫ್ರೀಡಂ ಪಾರ್ಕ್ ನಲ್ಲಿ ಅನಿರ್ದಿಷ್ಟಕಾಲ ಧರಣಿ ಸತ್ಯಾಗ್ರಹ ನಡೆಸಿ ಬೆಂಗಳೂರು ಚಲೋಗೆ ಕರೆ ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಬರೋಬ್ಬರಿ 1,32,000 ಅಂಗನವಾಡಿ ಕಾರ್ಯಕರ್ತೆಯರು & ಸಹಾಯಕಿಯರು ಇದ್ದಾರೆ. ಕೊರೊನಾ ಸಮಯದಲ್ಲಿ ಜೀವದ ಹಂಗು ತೊರೆದು ಕೊರೊನಾ ವಾರಿಯರ್ ಆಗಿ ಕೆಲಸ ಮಾಡಿದ್ದಾರೆ. ಈ ಸಮಯದಲ್ಲಿ ಹಲವು ಅಂಗನವಾಡಿ ಕಾರ್ಯಕರ್ತೆಯರು & ಸಹಾಯಕಿಯರು ಮರಣ ಹೊಂದಿದ್ದಾರೆ. ಇದರಿಂದ ಅನೇಕ ಕುಟುಂಬಗಳು ಬೀದಿ ಪಾಲಾಗಿವೆ. ಸರ್ಕಾರದಿಂದ 1,32,000 ಅಂಗನವಾಡಿ ಕಾರ್ಯಕರ್ತೆಯರು & ಸಹಾಯಕಿಯರಿಗೆ ಗೌರವ ಧನ ಹೆಸರಲ್ಲಿ ಶೋಷಣೆ ಮಾಡುತ್ತಿದೆ. ಇವರಿಗೆ ಯಾವುದೇ ರೀತಿಯ ಸಾಮಾಜಿಕ ಭದ್ರತೆ ಕಲ್ಪಿಸಿಲ್ಲ. ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರಿಗೆ & ಸಹಾಯಕರಿಗೆ ಕನಿಷ್ಠ ವೇತನ ಜಾರಿ ಮಾಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲು ಮುಂದಾಗಿದ್ದಾರೆ.

ಬೇಡಿಕೆಗಳು ಏನೇನು? ಅಂಗನವಾಡಿ ಕಾರ್ಯಕರ್ತೆಯರಿಗೆ & ಸಹಾಯಕಿಯರಿಗೆ ಕನಿಷ್ಠ 21,000 ವೇತನ ನೀಡಬೇಕು, ಕಾಂಗ್ರೆಸ್ ಪಕ್ಷವು ಚುನಾವಣಾ ಪೂರ್ವದಲ್ಲಿ ಘೋಷಣೆ ಮಾಡಿದಂತೆ 6ನೇ ಗ್ಯಾರಂಟಿ ಜಾರಿ ಮಾಡಬೇಕು, ಎಲ್ಲಾ ಮಿನಿ ಅಂಗನವಾಡಿ ಕೇಂದ್ರಗಳನ್ನ ಮೇಲ್ದರ್ಜೆಗೆ ಏರಿಸಬೇಕು, ಸುಪ್ರೀಂ ಕೋರ್ಟ್ ಆದೇಶದಂತೆ ನಿವೃತ್ತಿಯಾದ ಅಂಗನವಾಡಿ ಕಾರ್ಯಕರ್ತೆಯರಿಗೆ & ಸಹಾಯಕರಿಗೆ ಗ್ರಾಜ್ಯುಟಿ ಹಣ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

## ಐಪಿಎಸ್ ಅಧಿಕಾರಿ ರವಿ ಚನ್ನಣ್ಣನವರ್ ಹೆಸರಲ್ಲಿ ವಂಚನೆ



ಬೆಂಗಳೂರು: ಕರ್ನಾಟಕದ ಐಪಿಎಸ್ ಅಧಿಕಾರಿ ರವಿ ಚನ್ನಣ್ಣನವರ್ ಹಾಗೂ ಸಿಆರ್‌ಪಿಎಫ್ ಯೋಧನ ಹೆಸರಲ್ಲಿ ವಂಚನೆ ಮಾಡಲಾಗಿದೆ. ಗದಗನ ಬೆಟಗೇರಿಯ ರಮೇಶ್ ಹತ್ತಿಕಾಳ ಎಂಬ ವ್ಯಕ್ತಿ ವಂಚನೆಗೆ ಒಳಗಾಗಿದ್ದಾರೆ. 55 ಸಾವಿರ ರೂಪಾಯಿ ಪಂಗನಾಮ ಹಾಕಿದ ಬಳಿಕ ರಮೇಶ್ ಎಚ್ಚೆತ್ತುಕೊಂಡಿದ್ದಾರೆ. ನವೆಂಬರ್ 7 ರಂದು ರವಿ ಚನ್ನಣ್ಣನವರ್ ಖಕಖ ಹೆಸರಿನ ನಕಲಿ ಫೆಸ್ಬುಕ್ ಖಾತೆಯಿಂದ ರಮೇಶ್ಗೆ ಮೆಸೇಜ್ ಬಂದಿದೆ. ನನ್ನ ಫ್ರೆಂಡ್ CRPF ಯೋಧ ಸಂತೋಷಕುಮಾರ್ಗೆ ಟ್ರಾನ್ಸ್ಪರ್ ಆಗಿದೆ. ಹೀಗಾಗಿ ಅವರು ಕಡಿಮೆ ಬೆಲೆಗೆ ತಮ್ಮ ಫರ್ನಿಚರ್ ಮಾರಾಟ ಮಾಡ್ತಿದ್ದಾರೆ ಎಂದು ಮೇಸೆಜ್ ಮಾಡಿದ್ದಾರೆ. ನಂಬಿದ ರಮೇಶ್ ಹತ್ತಿಕಾಳ ಅದನ್ನು ಕೊಂಡುಕೊಳ್ಳಲು 55 ಸಾವಿರ ರೂಪಾಯಿ ಹಣ ಹಾಕಿದ್ದಾರೆ ಎನ್ನಲಾಗಿದೆ. ಹಣ ಕಳೆದುಕೊಂಡ ಮೇಲೆ ಎಚ್ಚೆತ್ತ ರಮೇಶ್ ತಕ್ಷಣ ಸೈಬರ್ ಕ್ರೈಂ ಠಾಣೆಗೆ ದೂರು ದಾಖಲಿಸಿದ್ದಾರೆ.

# ಕುಶಲಕರ್ಮಿಗಳ ವೃತ್ತಿ ಸದೃಢಗೊಳಿಸಲು ಪಿ.ಎಂ ವಿಶ್ವಕರ್ಮ ಯೋಜನೆ ಜಾರಿ: ಸಂಸದರು ಬಿ.ವೈ.ರಾಘವೇಂದ್ರ

ಶಿವಮೊಗ್ಗ: ಪ್ರಧಾನಿಯವರು ದೇಶದಲ್ಲಿರುವ ಕುಶಲಕರ್ಮಿಗಳಿಗೆ ಅವರ ವೃತ್ತಿಯನ್ನು ಸದೃಢಗೊಳಿಸಲು ದಿನಾಂಕ 17-09-2023 "ಪಿ.ಎಂ.ವಿಶ್ವಕರ್ಮ" ಯೋಜನೆಯನ್ನು ಜಾರಿಗೊಳಿಸಿರುತ್ತಾರೆ ಎಂದು ಸಂಸದರಾದ ಬಿ.ವೈ.ರಾಘವೇಂದ್ರ ತಿಳಿಸಿದರು.

ಶಿವಮೊಗ್ಗ ಜಿಲ್ಲಾ ಚಿನ್ನ-ಬೆಳ್ಳಿ ವೃತ್ತಿಗಾರರ ಹಿತಾರಕ್ಷಣಾ ಸಮಿತಿ ಆಶ್ರಯದಲ್ಲಿ, ಜಿಲ್ಲಾ ಕೈಗಾರಿಕಾ ಕೇಂದ್ರ ಶಿವಮೊಗ್ಗ ಹಾಗೂ ಸಾಮಾನ್ಯ ಸೇವಾ ಕೇಂದ್ರ ರವರ ಸಹಕಾರದೊಂದಿಗೆ ಇಂದು ಗಾಂಧಿ ಬಜಾರಿನ ಬಸವೇಶ್ವರ ದೇವಸ್ಥಾನ ಸಭಾಂಣದಲ್ಲಿ ಏರ್ಪಡಿಸಲಾಗಿದ್ದ 'ಪಿ.ಎಂ.ವಿಶ್ವಕರ್ಮ' ಯೋಜನೆಯಡಿ ಕುಶಲಕರ್ಮಿಗಳ ನೋಂದಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಯೋಜನೆಯಡಿ ಕುಶಲಕರ್ಮಿಗಳಿಗೆ "ಪಿ.ಎಂ.ವಿಶ್ವಕರ್ಮ' ಕಾರ್ಡ್ ವಿತರಣೆ, ತರಬೇತಿ, ಉಪಕರಣಗಳ ಕಿಟ್, ಪ್ರೋತ್ಸಾಹ, ಮೊದಲ ಹಂತದಲ್ಲಿ ರೂ. 6 ಲಕ್ಷ, 2ನೇ ಹಂತದಲ್ಲಿ ರೂ.2 ಲಕ್ಷದವರೆಗಿನ ಸಾಲವನ್ನು ಬ್ಯಾಂಕಿನ ಮೂಲಕ ಕೇವಲ ಶೇಕಡ 5 ರಷ್ಟು ಬಡ್ಡಿ ದರದಲ್ಲಿ ನೀಡಲಾಗುವುದು.

ಆದ್ದರಿಂದ ಜಿಲ್ಲೆಯಲ್ಲಿ ಈ ವೃತ್ತಿಗಳಲ್ಲಿ ತೊಡಗಿರುವ ಬಡಗಿ/ಮರಗೆಲಸ ವೃತ್ತಿ ಮಾಡುವವರು, ದೋಣಿ ತಯಾರಿಸುವವರು, ಶಸ್ತ್ರ ತಯಾರಕರು, ಕಮ್ಮಾರ ವೃತ್ತಿ ಮಾಡುವವರು, ಕಲ್ಲುಕುಟಿಗ ವೃತ್ತಿ ಮಾಡುವವರು, ಚಾಪೆ-ಕಸ



ಪೊರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಕರು (ಸಾಂಪ್ರದಾಯಿಕ), ಕ್ಷೌರಿಕ ವೃತ್ತಿ ಮಾಡುವವರು, ಸುತ್ತಿಗೆ ಮತ್ತು ಉಪಕರಣಗಳನ್ನು ತಯಾರಿಸುವವರು, ಹೂಮಾಲೆ ತಯಾರಕರು, ಅಗಸರು (ದೋಬಿ), ಆಭರಣ ತಯಾರಕರು, ಶಿಂಪಿಗ (ಬಟ್ಟೆ ಹೊಲೆಯುವರು), ಕುಂಬಾರ ವೃತ್ತಿ ಮಾಡುವವರು, ಮೀನು ಬಲೆ ಹೆಣೆಯುವವರು, ಶಿಲ್ಪಿ (ಮೂರ್ತಿ ಮತ್ತು ಕಲ್ಲಿನ ಕೆತ್ತನೆ), ಚಮ್ಮಾರ ಪಾದರಕ್ಷೆ ತಯಾರಕರು, ಬೀಗ ತಯಾರಕರು ಇಂತಹ ಕುಶಲಕರ್ಮಿಗಳು ಸಾಮಾನ್ಯ ಸೇವಾ ಕೇಂದ್ರದ ಮೂಲಕ ನೋಂದಣಿ ಮಾಡಿಸಿಕೊಂಡು ಈ ಯೋಜನೆಯಡಿ ಸೌಲಭ್ಯ ಪಡೆದುಕೊಳ್ಳಲು ತಿಳಿಸಿದರು. ಪಿ.ಎಂ ವಿಶ್ವಕರ್ಮ ಯೋಜನೆಯಡಿ ಕುಶಲಕರ್ಮಿಗಳ ನೋಂದಣಿಯಲ್ಲಿ ಕರ್ನಾಟಕ ರಾಜ್ಯವು ಪ್ರಥಮ ಸ್ಥಾನದಲ್ಲಿರುವುದು ಹೆಮ್ಮೆಯ ವಿಷಯವೆಂದು ತಿಳಿಸಿದರು.

ಶಾಸಕರಾದ ಎಸ್. ಎನ್. ಚನ್ನಬಸಪ್ಪನವರು ಮಾತನಾಡಿ ಇಂದು ಶಿವಮೊಗ್ಗದ ಗಾಂಧಿ ಬಜಾರ್ನ ಬಸವೇಶ್ವರ ದೇವಸ್ಥಾನದಲ್ಲಿ ನೋಂದಣಿ ಕಾರ್ಯಕ್ರಮ ಹಮ್ಮಿಕೊಂಡಂತೆ ಜಿಲ್ಲೆಯಾದ್ಯಂತ ಇನ್ನೂ ಹೆಚ್ಚಿನ ಸಂಘ ಸಂಸ್ಥೆಗಳು ನೋಂದಣಿ ಪ್ರಕ್ರಿಯೆಯಲ್ಲಿ ತೊಡಗಿಕೊಳ್ಳಲಿ.

ಈ ಯೋಜನೆಯಡಿ ಎಲ್ಲ ವರ್ಗದ ಕುಶಲಕರ್ಮಿಗಳು ಸೌಲಭ್ಯ ಪಡೆದುಕೊಳ್ಳುವಂತೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಚಿನ್ನ-ಬೆಳ್ಳಿ ವರ್ತಕರ ಸಂಘದ ಅಧ್ಯಕ್ಷರಾದ ಎಸ್ ರಮೇಶ್, ಕಾರ್ಯದರ್ಶಿ ಸೋಮೇಶ್ ಪಿ. ಶೇಟ್, ಕಾಳಿಕಾ ಪರಮೇಶ್ವರಿ ಸೊಸೈಟಿಯ ಅಧ್ಯಕ್ಷರು, ಮಾಲತೇಶ್, ಗುರುಶೇಟ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಆರ್ ಗಣೇಶ್, ಉಪ ನಿರ್ದೇಶಕರಾದ ವೀರೇಶ ನಾಯ್ಕ ರವರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಮಿಶ್ರತಳಿ ಹಸು ಘಟಕ ಯೋಜನೆಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ: ಪಶುಪಾಲನ ಮತ್ತು ಪಶುವೈದ್ಯ ಸೇವಾ ಇಲಾಖೆಯು 2023-24 ನೇ ಸಾಲಿನಲ್ಲಿ ವಿಶೇಷ ಘಟಕ ಮತ್ತು ಗಿರಿಜನ ಉಪ ಯೋಜನೆಯಡಿ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದ ಉಳಿಕೆ ಅನುದಾನದಲ್ಲಿ ಮಿಶ್ರತಳಿ ಹಸು ಘಟಕ ಯೋಜನೆ ಅನುಷ್ಠಾನಗೊಳಿಸಲು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕೂಲಿ ಕಾರ್ಮಿಕರು ಕೃಷಿ ಕಾರ್ಮಿಕರು ಮತ್ತು ಪಶುಸಂಗೋಪನೆಯಲ್ಲಿ ತೊಡಗಿಸಿಕೊಂಡ ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಸರ್ಕಾರಿ ನಿಯಮಾನುಸಾರ ಮೀಸಲಾತಿಯಂತೆ ಮಹಿಳೆಯರಿಗೆ ಹಾಗೂ ಅಂಗವಿಕಲರಿಗೆ ಆದ್ಯತೆ ನೀಡಿ ಆಯ್ಕೆ ಮಾಡಲಾಗುವುದು. ಒಂದು ಮಿಶ್ರತಳಿ ಘಟಕದ ವೆಚ್ಚ 65,000=00 ರೂ. ಇದ್ದು ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಪಲಾನುಭವಿಗಳಿಗೆ ಶೇ 90 58500=00ರೂ. ಸಹಾಯಧನ ಹಾಗೂ (ಶೇ.10), 6500=00 ರೂ. ಫಲಾನುಭವಿಗಳಿಗೆ ವಂತಿಗೆ ಅಥವಾ ಬ್ಯಾಂಕಿನ ಸಾಲದೊಂದಿಗೆ ಅನುಷ್ಠಾನಗೊಳಿಸಲಾಗುವುದು ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸದಸ್ಯತ್ವ ಹೊದಿರುವ ಮಹಿಳೆಯರಿಗೆ ಶೇ.33.3 ರಷ್ಟು ಮತ್ತು ಅಂಗವಿಕಲರಿಗೆ ಶೇ.3 ರಷ್ಟು ಆದ್ಯತೆ ನೀಡಲಾಗುವುದು.

ಆಸಕ್ತ ಫಲಾನುಭವಿಗಳು ಈ ಹಿಂದೆ ಸ್ವತಃ ತಾನೇ ಅಥವಾ ಕೃಷಿ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ಮತ್ತು ಇಲಾಖೆಯ ಯಾವುದೇ ಪಶುವೈದ್ಯಕೀಯ ಸಂಸ್ಥೆಗಳಲ್ಲಿ ಅಧಿಕಾರಿಗಳಿಗೆ ಅಗತ್ಯವಿರುವ ಮಾಹಿತಿ ನೀಡಿ ಶಾಶ್ವತ FRUITS ID (ಗುರುತಿನ ಸಂಖ್ಯೆ) ಪಡೆದು, ಅರ್ಜಿಯೊಂದಿಗೆ ನಮೂದಿಸತಕ್ಕದ್ದು. ಈಖಗಖಖಿಖ ಖಆ (ಗುರುತಿನ ಸಂಖ್ಯೆ) ಹೊಂದಿರುವ ಫಲಾನುಭವಿಗಳು ಅದರಲ್ಲಿ ನಮೂದಿಸಿದ ಮಾಹಿತಿಯನ್ನು ಹೊರತುಪಡಿಸಿ ಉಳಿದ ದಾಖಲಾತಿಗಳನ್ನು ಮಾತ್ರ ಅರ್ಜಿಯೊಂದಿಗೆ ಲಗತ್ತಿಸುವುದು.

ಆಸಕ್ತ ಅರ್ಜಿದಾರರು ಆಯಾ ತಾಲ್ಲೂಕಿನ ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ರವರಿಂದ ಅರ್ಜಿ ನಮೂನೆ ಪಡೆದು ದಿ:28/11/2023 ರ ಸಂಜೆ 4:00 ಗಂಟೆಯೊಳಗಾಗಿ ಎಲ್ಲಾ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಇಲಾಖೆಯ ಉಪ ನಿರ್ದೇಶಕ ಡಾ॥ ಶಿವಯೋಗಿ ಬಿ.ಯಲಿರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಯನ್ನು ಆಯಾ ತಾಲ್ಲೂಕು ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ರವರ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಂಪರ್ಕಿಸಬಹುದಾದ ದೂ.ಸಂ.: ಶಿವಮೊಗ್ಗ ತಾಲ್ಲೂಕು: 9448147113, ಭದ್ರಾವತಿ ತಾಲ್ಲೂಕು: 9482635093, ತೀರ್ಥಹಳ್ಳಿ ತಾಲ್ಲೂಕು: 9448165747, ಹೊಸನಗರ ತಾಲ್ಲೂಕು: 9448165747, ಸಾಗರ ತಾಲ್ಲೂಕು: 9481255897, ಸೊರಬ ತಾಲ್ಲೂಕು: 9900632880, ಶಿಕಾರಿಪುರ ತಾಲ್ಲೂಕು : 94484381142.

# ಯುವಕ ಆತ್ಮಹತ್ಯೆ ಕೇಸ್: ಇಬ್ಬರು ಕಾನ್ಸ್‌ಟೇಬಲ್‌ಗಳು ಅಮಾನತು

ಮೈಸೂರು: ಪೊಲೀಸರ ಕಿರುಕುಳದಿಂದ ಯುವಕ ಆತ್ಮಹತ್ಯೆ ಮಾಡಿಕೊಂಡ ಕೇಸ್ಗೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಇಬ್ಬರು ಪೊಲೀಸ್ ಕಾನ್ಸ್ಟೇಬಲ್‌ಗಳನ್ನ ಅಮಾನತುಗೊಳಿಸಿದ್ದಾರೆ.

ಜಿಲ್ಲೆಯ ಬಿಳಿಗೆರೆ ಪೊಲೀಸ್ ಠಾಣೆಯ ಕಾನ್ಸ್ಟೇಬಲ್ಗಳಾದ ನಂಜೇಶ್ ಮತ್ತು ಪ್ರಸನ್ನ ಕುಮಾರ್ ಅಮಾನತು. ನನಗೆ ಪೊಲೀಸರು ಕಿರುಕುಳ ನೀಡಿದ್ದಾರೆ ಎಂದು ಯುವಕ ಆತ್ಮಹತ್ಯೆಗೂ ಮುನ್ನ ಹೇಳಿದ್ದನು.

ಈ ಹಿನ್ನೆಲೆಯಲ್ಲಿ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ, ಬೇಜವಾಬ್ದಾರಿತನ ಹಾಗೂ ಕರ್ತವ್ಯ ಲೋಪವೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ಅವರು ಇಬ್ಬರು ಕಾನ್ಸ್ಟೇಬಲ್ಗಳನ್ನು ಅಮಾನತು ಮಾಡಿದ್ದಾರೆ.

ನವೆಂಬರ್ 12 ರಂದು ನಂಜನಗೂಡು ತಾಲೂಕಿನ




ನಗರ್ಲೆ ಗ್ರಾಮದಲ್ಲಿ ಕಿರಣ್ ಕುಮಾರ್ ಎಂಬ ಯುವಕನನ್ನು ಪೊಲೀಸರು ಠಾಣೆಗೆ ಕರೆದೊಕೊಂಡು ಬಂದಿದ್ದರು. ಈ ವೇಳೆ ಪೊಲೀಸರಿಂದ ತಪ್ಪಿಸಿಕೊಂಡು ಯುವಕ ಮನೆಗೆ ಬಂದಿದ್ದ. ಬಳಿಕ ನವೆಂಬರ್ 13 ರಂದು ಪೆಟ್ರೋಲ್ ಅನ್ನು ತನ್ನ ಮೈ ಮೇಲೆ ಸುರಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದನು. ಈ ಸಂಬಂಧ ಬಿಳಿಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ಕುಡಿಯುವ ನೀರು ಮತ್ತು ಮೇವಿನ ಕೊರತೆಯಾಗದಂತೆ ಕ್ರಮ ವಹಿಸಲು ಡಿಸಿ ಸೂಚನೆ

ಶಿವಮೊಗ್ಗ: ಬರುವ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಅಭಾವ ತಲೆದೋರುವ ಸಂಭವವಿದ್ದು, ಎಲ್ಲಾ ತಾಲ್ಲೂಕು ತಹಶೀಲ್ದಾರ್ಗಳು ಹಾಗೂ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿಗಳು ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ.ಆರ್.ಸೆಲ್ವಮಣಿ ಸೂಚನೆ ನೀಡಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಬರ ಮತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬರ ನಿರ್ವಹಣೆ ಸಂಬಂಧ ನವೆಂಬರ್ ಮಾಸಾಂತ್ಯದೊಳಗಾಗಿ ತಾಲ್ಲೂಕು ಟಾಸ್ಕ್‌ಫೋರ್ಸ್ ಸಭೆ ನಡೆಸುವಂತೆ ತಹಶೀಲ್ದಾರರಿಗೆ ಸೂಚಿಸಿದ ಅವರು ಜಾನುವಾರುಗಳ ಮೇವಿನ ಸಮಸ್ಯೆ ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದರು.



ಗ್ರಾ.ಪಂ ವಾರು ರೈತರ ಜಮೀನುಗಳನ್ನು ಗುರುತಿಸಿ ಫ್ರೂಟ್ಸ್ (FRUITS) ತಂತ್ರಾಂಶದಲ್ಲಿ ರೈತರ ಆಧಾರ್ ಲಿಂಕ್ ಮಾಡಬೇಕು. ತೋಟಗಾರಿಕೆ, ಕೃಷಿ, ನರೇಗಾ ಯೋಜನೆಗಳಿಗೆ ಸಂಬಂಧಿಸಿದಂತೆ ಫ್ರೂಟ್ಸ್ ತಂತ್ರಾಂಶದಲ್ಲಿ ಆಧಾರ್ ಲಿಂಕ್ ಮಾಡಬೇಕು. ಈಗಾಗಲೇ ತಂತ್ರಾಂಶದಲ್ಲಿ ಜಮೀನನ್ನು ಗುರುತಿಸಿ ಲಿಂಕ್ ಮಾಡಲಾಗುತ್ತಿದ್ದು, ಇನ್ನೊಂದು ತಿಂಗಳ ಒಳಗೆ ತೋಟಗಾರಿಕೆ, ಕೃಷಿ ಮತ್ತು ಕಂದಾಯ ಇಲಾಖೆ ವತಿಯಿಂದ ಈ ಕೆಲಸವನ್ನು ಪೂರ್ಣಗೊಳಿಸಬೇಕೆಂದರು.

ನರೇಗಾ ಅಡಿಯಲ್ಲಿ ತಾ.ಪಂ ಇಓ ಗಳು ಕಾರ್ಮಿಕರಿಗೆ ಕೆಲಸಗಳನ್ನು ನೀಡಬೇಕು. ಸಾಗರ ಮತ್ತು ಸೊರಬದಲ್ಲಿ ಬೇಡಿಕೆ ಹೆಚ್ಚಿದೆ. ಗುರುತಿಸಿ ಕೆಲಸಗಳನ್ನು ನೀಡಬೇಕು ಎಂದು ಸೂಚನೆ ನೀಡಿದರು. ಹಾಗೂ ಮಳೆ ಬಂದು ಬಿದ್ದಿರುವ, ಹಾನಿಗೊಳಗಾದ ಮನೆಗಳ ಜಿಪಿಎಸ್ ಬಾಕಿ ಇರುವುದನ್ನು ಪಿಡಿಓ ಗಳು ಪರಿಶೀಲಿಸಿ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಎಲ್ಲ ತಹಶೀಲ್ದಾರ್, ಇಓ ಗಳು ಪಿಡಿಓ ಗಳ ಜೊತೆಗೂಡಿ ಪ್ರತಿ 15 ದಿನಗಳಿಗೆ ಒಮ್ಮೆ ಬರ ನಿರ್ವಹಣೆ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಸಬೇಕು ಎಂದು ಸೂಚಿಸಿದ ಅವರು ಜಾನುವಾರು ಮೇವಿಗೆ ಕೊರತೆಯಾಗದಂತೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಪಶುಪಾಲನಾ ಇಲಾಖೆ ಉಪನಿರ್ದೇಶಕ ಡಾ.ಶಿವಯೋಗಿ ಯಲಿ ಮಾತನಾಡಿ, ಮುಂದಿನ 23 ವಾರುಗಳಿಗೆ ಜಾನುವಾರುಗಳ ಮೇವಿಗೆ ಕೊರತೆ ಇಲ್ಲ. ಶಿಕಾರಿಪುರ ಸೊರಬದಲ್ಲಿ 16 ವಾರಗಳಿಗೆ ಸಾಕಾಗುವಷ್ಟು ಮೇವಿದೆ. 29 ಸಾವಿರ ಮೇವಿನ ಕಿಟ್ಗಳನ್ನು ತರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿ.ಪಂ ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ, ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ, ಎಸಿ ಗಳಾದ ಸತ್ಯನಾರಾಯಣ್ ಮತ್ತು ಪಲ್ಲವಿ ಸಾತೇನಹಳ್ಳಿ, ಡಿಯುಡಿಸಿ ಪಿಡಿ ಮನೋಹರ್, ಕೃಷಿ ಜಂಟಿ ನಿರ್ದೇಶಕಿ ಪೂರ್ಣಿಮಾ, ತಹಶೀಲ್ದಾರರು, ತಾ.ಪಂ ಇಓ ಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಯುವಕರಿಂದ ಉತ್ತಮ ಸಮಾಜ ನಿರ್ಮಾಣ: ಎಸ್ ಎನ್ ಚನ್ನಬಸಪ್ಪ

ಶಿವಮೊಗ್ಗ: ಯುವ ಜನತೆ ಪರಸ್ಪರ ಒಳೆಯ ಕಾರ್ಯಗಳನ್ನು ಮಾಡುವ ಮೂಲಕ ಉತ್ತಮ ಸಮಾಜ ನಿರ್ಮಾಣ ಮಾಡಬೇಕೆಂದು ಶಿವಮೊಗ್ಗ ನಗರ ಕ್ಷೇತ್ರ ಶಾಸಕರಾದ ಎಸ್. ಎನ್ ಚನ್ನಬಸಪ್ಪ ನುಡಿದರು.

ಈಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಸೇವಾ ಯೋಜನೆ, ನೆಹರೂ ಯುವ ಕೇಂದ್ರ, ನಿಸರ್ಗ ಯುವತಿ ಮಂಡಳಿ, ಶಿವಮೊಗ್ಗ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಕುವೆಂಪು ರಂಗಮಂದಿರದಲ್ಲಿ 2023-24ನೇ ಸಾಲಿನ ಶಿವಮೊಗ್ಗ ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಅವರು ಮಾತನಾಡಿದರು.

ಯುವಕರಿದ್ದಾಗ ಅತ್ಯುತ್ತಮ ಕೆಲಸಗಳನ್ನು ಮಾಡಲು ಸಾಧ್ಯವಿದ್ದು, ದೇಶಕ್ಕಾಗಿ ದುಡಿಯಬೇಕು. ಇಂತಹ ಯುವಜನೋತ್ಸವದಲ್ಲಿ ಯುವಕರು ಸ್ಪರ್ಧಾ ಮನೋಭಾವದಿಂದ ಭಾಗವಹಿಸಿ ಇತರರು ಭಾಗವಹಿಸುವಂತೆ ಮಾಡಬೇಕು. ಹಾಗೂ ಸಂಸ್ಕೃತಿ ಮತ್ತು ಕಲಾ ಪರಂಪರೆಯನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡಬೇಕು. ಯುವಕರ ಸ್ವಾವಲಂಬನೆಗಾಗಿ ಅನೇಕ ಕಾರ್ಯಕ್ರಮಗಳನ್ನು ಸರ್ಕಾರ ರೂಪಿಸಿದ್ದು ಅದನ್ನು ಬಳಕೆ ಮಾಡಿಕೊಳ್ಳಿರಿ ಎಂದು ಕರೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಶಾಸಕರಾದ ಡಿ.ಎಸ್ ಅರುಣ್ ಮಾತನಾಡಿ, ನೈತಿಕತೆ, ಸಂವಿಧಾನ ಮತ್ತು ಪ್ರಸ್ತುತದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯ ರಾಜ್ಯಾಂಗ, ಶಾಸಕಾಂಗ, ಕಾರ್ಯಾಂಗದ ವ್ಯವಸ್ಥೆಯನ್ನು ಇಂದಿನ ವಿದ್ಯಾರ್ಥಿಗಳು ಹೆಚ್ಚು ಒಗ್ಗೂಡಿಸಿಕೊಳ್ಳಬೇಕು. ಶಾಸಕಾಂಗದ ಟೀಕೆ ಸರ್ವೇ ಸಾಮಾನ್ಯ ಆದರೆ ಶಾಸಕಾಂಗದ ಬಗ್ಗೆ ತಿಳಿದುಕೊಂಡು



ಯುವಜನತೆ ವ್ಯವಸ್ಥೆಯನ್ನು ಸರಿ ಮಾಡುವ ಕೆಲಸ ಮಾಡಬೇಕು. ದೇಶದಲ್ಲಿ ಶೇ.55 ರಷ್ಟು ಯುವಜನತೆ ಇದ್ದು, ಮುಂದಿನ ಪೀಳಿಗೆಗೆ ಏನಾದರೂ ಕಾಣಿಕೆ ಕೊಡುವಂತಿರಬೇಕು.

ನಿಜ ಜೀವನದಲ್ಲಿ ನೈತಿಕವಾಗಿ ಸದೃಢರಾಗಬೇಕು. ಆಗ ಉತ್ತಮ ಭವಿಷ್ಯ ಸಾಧ್ಯ. ಶುಇಕ್ಷಣದೊಂದಿಗೆ ವ್ಯಕ್ತಿತ್ವ ನಿರ್ಮಾಣ ಕೆಲಸವಾದರೆ ಮಾತ್ರ ದೇಶದ ಬೆಳವಣಿಗೆ ಉತ್ತಮವಾಗುತ್ತದೆ. ಇದನ್ನು ಮಾಡುವುದು ನಮ್ಮೆಲ್ಲರ ಕರ್ತವ್ಯ. ಯುವಜನತೆ ದುಶ್ಚಟಗಳಿಂದ ದೂರವಿರಬೇಕು. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ನಮ್ಮ ಕಲೆ, ಸಂಸ್ಕೃತಿ ಕಾಪಾಡಲು ಹಲವು ಸಂಸ್ಕೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಯುವಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಎಂ.ಟಿ ಮಂಜುನಾಥಸ್ವಾಮಿ ಮಾತನಾಡಿ, ಜಾನಪದದ ಜೊತೆಗೆ ಈ ಬಾರಿ ಹಲವು ಸೃಜನಾತ್ಮಕ ಸ್ಪರ್ಧೆಗಳನ್ನೂ ಸಹ ಆಯೋಜಿಸಲಾಗಿದೆ. ಇಲ್ಲಿ ಆಯ್ಕೆಯಾದವರು ರಾಜ್ಯ ಮಟ್ಟದಲ್ಲು ಭಾಗವಹಿಸುತ್ತಾರೆ ಎಂದು ಪ್ರಾಸ್ತಾವಿಕ ನುಡಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉಮೇಶ್.ಹೆಚ್, ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋನಾಧಿಕಾರಿಗಳಾದ ಪರಿಸರ ನಾಗರಾಜ್, ಜಿಲ್ಲಾ ಯುವ ಅಧಿಕಾರಿ ಉಲ್ಲಾಸ್ ಕೆ.ಟಿ.ಕೆ, ಮಹೇಶ್, ಗಣೇಶ್ ಕೆಂಚನಾಲ್, ಮಹೇಂದ್ರ ಇತರರು ಉಪಸ್ಥಿತರಿದ್ದರು.

# ಯುವ ಸೌರಭ ಕಾರ್ಯಕ್ರಮ-2023

## ಯುವ ಪೀಳಿಗೆ ಸಂಸ್ಕೃತಿಕ ಮನೋಭಾವ ಬೆಳೆಸಿಕೊಳ್ಳಬೇಕು: ಶ್ರೀ ಡಾ. ಅಲ್ಲಮಪ್ರಭು ಮಹಾ ಸ್ವಾಮಿಗಳು

ಬೆಳಗಾವಿ: ಮಕ್ಕಳು ಒಳ್ಳೆಯ ಶಿಕ್ಷಣದ ಜೊತೆಗೆ ಸಂಸ್ಕೃತಿಕ ಮನೋಭಾವ ಬೆಳೆಸಿಕೊಳ್ಳಬೇಕಿದೆ. ಆದರಿಂದ ಪ್ರತಿ ವರ್ಷದಂತೆ ಸಂಸ್ಕೃತಿ ಇಲಾಖೆ ಹಮ್ಮಿಕೊಳ್ಳುತ್ತಿರುವ ಯುವ ಸೌರಭ ಕಾರ್ಯಕ್ರಮ ವೇದಿಕೆ ಮಕ್ಕಳಿಗೆ ಉತ್ತಮ ಭವಿಷ್ಯ ಕಲ್ಪಿಸಲಿದೆ ಎಂದು ನಾಗುನೂರ ರುದ್ರಾಕ್ಷಿ ಮಠದ ಪೂಜ್ಯ ಶ್ರೀ ಡಾ. ಅಲ್ಲಮಪ್ರಭು ಮಹಾ ಸ್ವಾಮಿಗಳು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಎಸ್. ಜಿ. ಬಾಳೇಕುಂದ್ರಿ ತಾಂತ್ರಿಕ ಮಹಾವಿದ್ಯಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ನ.21)



ಏರ್ಪಡಿಸಲಾಗಿದ್ದ, ಯುವ ಸೌರಭ 2023ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ಅಧ್ಯಯನವೆ ದಾರಿ ದೀಪ. ಸಂಸ್ಕೃತಿ, ಸಂಗೀತ, ಮನೋರಂಜನಾ ಕಾರ್ಯಕ್ರಮಗಳು ಮಕ್ಕಳನ್ನು ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢ ಗೊಳಿಸಲಿವೆ ಎಂದು ಹೇಳಿದರು.

ಮಕ್ಕಳು ಮೊಬೈಲ್ ಹಾಗೂ ಟಿ.ವಿ ಗಳನ್ನು ನೋಡಿ ಸಮಯ ವ್ಯರ್ಥ ಮಾಡದೇ ಸಂಗೀತ, ಸಾಹಿತ್ಯ, ನೃತ್ಯ, ಜಾನಪದ, ಡೊಳ್ಳಿನ ಪದ, ಸೇರಿದಂತೆ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳನ್ನು ನೋಡುವ ಮೂಲಕ ಯುವ ಪೀಳಿಗೆ ಕಲಾತ್ಮಕ ಗುಣ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

**ವಿವಿಧ ಕಲಾ ತಂಡಗಳು ಭಾಗಿ:**

ಯುವ ಸೌರಭ ಕಾರ್ಯಕ್ರಮದಲ್ಲಿ ವಿವಿಧ ಕಲಾ ತಂಡಗಳಿಂದ ನೃತ್ಯ, ಸಂಗೀತ, ಕಿರು ನಾಟಕಗಳ ಪ್ರದರ್ಶನಗಳು ಸೇರಿದಂತೆ ಮನೋರಂಜನಾ ಕಾರ್ಯಕ್ರಮಗಳು ನಡೆದವು.

ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಸಿದ್ದರಾಮ ರೆಡ್ಡಿ, ಹಿರಿಯ ಕಲಾವಿದ ಗೋಪಾಲ ಚಿಪನಿ, ರೋಹಿಣಿ ಗಂಗಾಧರಯ್ಯ, ಎಸ್. ಜಿ. ಬಾಳೇಕುಂದ್ರಿ ತಾಂತ್ರಿಕ ಮಹಾವಿದ್ಯಾಲಯ ಪ್ರಭಾರಿ ಪ್ರಾಚಾರ್ಯರಾದ ರಾಜೇಂದ್ರ ಗಲಗಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಹಾಗೂ ಮತಿತ್ತರರು ಉಪಸ್ಥಿತರಿದ್ದರು. ಸಿದ್ದರಾಮೇಶ್ವರ ಕಾಲೇಜಿನ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಕೈಕೊಟ್ಟ ಪ್ರಿಯಕರ: ಮನನೊಂದು ಯುವತಿ ಆತ್ಮಹತ್ಯೆಗೆ ಯತ್ನ



ಬೆಂಗಳೂರು: ಪ್ರಿಯಕರನ ಮನೆ ಮೇಲೇರಿ ಯುವತಿ ಆತ್ಮಹತ್ಯೆಗೆ ಯತ್ನಿಸಿದ ಘಟನೆಯೊಂದು ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ನಡೆದಿದೆ.

ಈ ಘಟನೆ ಬೆಂಗಳೂರಿನ ಹೆಗ್ಗನಹಳ್ಳಿಯಲ್ಲಿ ನಡೆದಿದೆ. ಯುವಕ ಹಾಗೂ ಯುವತಿ ಕಳೆದ ನಾಲ್ಕೈದು ವರ್ಷಗಳಿಂದ ಪ್ರೀತಿಸುತ್ತಿದ್ದರು. ಆದರೆ ಇದೀಗ ಯುವಕನು ಯುವತಿಗೆ ಕೈ ಕೊಟ್ಟಿದ್ದಾನೆ. ಪ್ರಿಯಕರ ಕೈಕೊಟ್ಟಿದ್ದರಿಂದ ಬೇಸರಗೊಂಡ ಯುವತಿ ನೇರವಾಗಿ ಆತನ ಮನೆಗೆ ತೆರಳಿದ್ದಾಳೆ. ಅಲ್ಲದೆ ಮನೆಯ ಟೆರೇಸ್ಗೆ ತೆರಳಿ ಆತ್ಮಹತ್ಯೆ ಮಾಡಿಕೊಳ್ಳುವ ಬೆದರಿಕೆ ಹಾಕಿದ್ದಾಳೆ. ಇತ್ತ ಯುವತಿ ಮನೆಗೆ ಬರುತ್ತಿದ್ದಂತೆಯೇ ಯುವಕ ಮನೆಯಿಂದ ಎಸ್ಕೇಪ್ ಆಗಿದ್ದಾನೆ. ಹೀಗಾಗಿ ಕೈಯಲಿ ಚಾಕು ಹಿಡಿದು ಪ್ರಿಯಕರನ ಮನೆ ಟೆರೇಸ್ ಮೇಲೆ ಯುವತಿ ನಿಂತಿದ್ದಾಳೆ. ಅಲ್ಲದೇ ಈಗಲೇ ಪ್ರಿಯಕರನನ್ನು ಇಲ್ಲಿಗೆ ಕರೆಸಿ ಎಂದು ಬೇಡಿಕೆ ಇಟ್ಟಿದ್ದಾಳೆ.

# ಕರಾಟೆ ಪಂದ್ಯಾವಳಿಯಲ್ಲಿ ಉತ್ತಮ ಸಾಧನೆ ಮಾಡಿರಿ: ಎಸ್.ಎನ್.ಚನ್ನಬಸಪ್ಪ

ಶಿವಮೊಗ್ಗ: ಕರಾಟೆ ಕ್ರೀಡಾಪಟುಗಳು ಅತ್ಯುತ್ತಮವಾಗಿ ಸ್ಪರ್ಧೆಗಳಲ್ಲಿ ಆಟವಾಡಿ ಉತ್ತಮ ಸಾಧನೆಗೈದು ಅಂತರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಳ್ಳಿರೆಂದು ಶಾಸಕರಾದ ಎಸ್.ಎನ್. ಚನ್ನಬಸಪ್ಪ ಕ್ರೀಡಾಪಟುಗಳಿಗೆ ಹಾರೈಸಿದರು.

ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ಶಿವಮೊಗ್ಗ ಸಹಯೋಗದಲ್ಲಿ ನೆಹರೂ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿರುವ ಎರಡು ದಿನಗಳ ರಾಜ್ಯ ಮಟ್ಟದ ಕರಾಟೆ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರಾಟೆ ಎಂದರೆ ಬ್ರೂಸ್ಲಿ ನೆನಪಾಗುತ್ತಾರೆ. ಬ್ರೂಸ್ಲಿ ಸಿನಿಮಾಗಳನ್ನು ನೋಡಿ ಕರಾಟೆ ಬಗ್ಗೆ ನಾವು ಹೆಚ್ಚು ಆಸಕ್ತಿ ಬೆಳಸಿಕೊಂಡಿದ್ದೆವು. ಇಂದಿನ ಸ್ಪರ್ಧೆಯಲ್ಲಿ ಅವರಂತಹ ಅನೇಕ ಕ್ರೀಡಾಪಟುಗಳು ಪಾಲ್ಗೊಂಡಿದ್ದು, ಎಲ್ಲರೂ ಉತ್ತಮವಾಗಿ ಆಟವಾಡಬೇಕೆಂದರು.

ಇಂದಿನ ಸ್ಪರ್ಧೆಯಲ್ಲಿ ವಿವಿಧ ಜಿಲ್ಲೆಗಳಿಂದ 1800 ಕರಾಟೆ ಕ್ರೀಡಾಪಟುಗಳು ಹಾಗೂ 60ಕ್ಕೂ ಹೆಚ್ಚು ಜನ ತೀರ್ಪುಗಾರರು ಪಾಲ್ಗೊಂಡಿದ್ದಾರೆ. ಎಲ್ಲ ಕ್ರೀಡಾಪಟುಗಳಿಗೆ ಶುಭವಾಗಲಿ. ರಾಜ್ಯದಿಂದ ರಾಷ್ಟ್ರ ಹಾಗೂ ರಾಷ್ಟ್ರದಿಂದ ಅಂತರಾಷ್ಟ್ರೀಯ



ಮಟ್ಟದಲ್ಲಿ ಕ್ರೀಡಾಪಟುಗಳು ಬೆಳೆಯಬೇಕು. ಹಾಗೂ ರಾಷ್ಟ್ರಕ್ಕೆ ಕೀರ್ತಿ ತರಬೇಕೆಂದು ಹೇಳಿದರು.

ವಿಧಾನ ಪರಿಷತ್ ಶಾಸಕಾದ ಡಿ.ಎಸ್. ಅರುಣ್ ಮಾತನಾಡಿ, ಇತ್ತೀಚೆಗೆ ಅತ್ಯುತ್ತಮ ತರಬೇತುದಾರರು, ರಿಫ್ರಿಗಳು ತಯಾರಾಗುತ್ತಿರುವುದು ಒಳ್ಳೆಯ ಬೆಳವಣಿಗೆ. ಬೇರೆ ಬೇರೆ ಜಿಲ್ಲೆಗಳಿಂದ ಕ್ರೀಡಾಪಟುಗಳು ಆಗಮಿಸಿದ್ದು, ಉತ್ತಮ ಸಾಧನೆ ಮಾಡಬೇಕು. ಹಾಗೂ ಇಲ್ಲಿ ರಾಷ್ಟ್ರ ಮಟ್ಟದ ಸ್ಪರ್ಧೆಯೂ ನಡೆಯಬೇಕೆಂದು ಆಶಿಸಿದ ಅವರು ಕ್ರೀಡಾಪಟುಗಳಿಗೆ ಶಾಸಕರು, ಇಲ್ಲಿನ ತಂಡ ಎಲ್ಲ ರೀತಿಯ ಪ್ರೋತ್ಸಾಹ ಮತ್ತು ಸಹಕಾರ ನೀಡುವರು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಣಾಧಿಕಾರಿ ಲೋಕೇಶಪ್ಪ, ಬಿಇಓ ನಾಗರಾಜ್, ಏಷಿಯನ್ ತೀಪುಗಾರ ಅಲ್ತಾಫ್, ವಿನೋದ್, ರಾಜ್ಯ ಕರಾಟೆ ಅಸೋಸಿಯೇಷನ್ ಪದಾಧಿಕಾರಿಗಳು, ಇತರೆ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ತಾಯಿ, ಮಗಳು ಬಲಿ; ಬೆಸ್ಕಾಂನ ಐವರು ಅಧಿಕಾರಿಗಳ ಅಮಾನತು



ಬೆಂಗಳೂರು: ವಿದ್ಯುತ್ ತಂತಿ ತುಳಿದು ತಾಯಿ-ಮಗಳು ಮೃತಪಟ್ಟ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕರ್ತವ್ಯ ಲೋಪ ಪತ್ತೆಯಾದ ಹಿನ್ನೆಲೆ ಐವರು ಬೆಸ್ಕಾಂ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಇಬ್ಬರು ಹಿರಿಯ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿದ್ದು, ಇಂಧನ ಇಲಾಖೆಯ ನಿರ್ದೇಶನ ಹಿನ್ನೆಲೆ ಅಮಾನತುಗೊಳಿಸಲಾಗಿದೆ. ನಾಲ್ಕನೇ ಪೂರ್ವ ವಿಭಾಗ ಸಹಾಯಕ ಕಾರ್ಯ ನಿರ್ವಾಹಕ ಎಂಜಿನಿಯರ್ ಸುಬ್ರಮಣ್ಯ.ಟಿ, ಸಹಾಯಕ ಎಂಜಿನಿಯರ್ ಚೇತನ್ ಎಸ್, ಹಿರಿಯ ಎಂಜಿನಿಯರ್ ರಾಜಣ್ಣ, ಕಿರಿಯ ಪವರ್ ಮ್ಯಾನ್ ಮಂಜುನಾಥ್ ರೇವಣ್ಣ, ಲೈನ್‌ಮ್ಯಾನ್ ಬಸವರಾಜು ಎಂಬವರನ್ನು ಅಮಾನತು ಮಾಡಲಾಗಿದೆ. ಪೂರ್ವ ವಿಭಾಗದ ಅಧೀಕ್ಷಕ ಎಂಜಿನಿಯರ್ ಲೋಕೇಶ್ ಬಾಬು ಮತ್ತು ಬೆಸ್ಕಾಂ ವೈಟ್ ವಿಭಾಗದ ಕಾರ್ಯ ನಿರ್ವಾಹಕ ಎಂಜಿನಿಯರ್ ಶ್ರೀರಾಮು ಅವರಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿದೆ. ಭಾನುವಾರ ಬೆಂಗಳೂರಿನ ವೈಟ್ ಫೀಲ್ಡ್‌ನ ಕಾಡುಗೋಡಿಯಲ್ಲಿ ಬೆಸ್ಕಾಂ ನಿರ್ಲಕ್ಷ್ಯಕ್ಕೆ ತಾಯಿ-ಮಗಳು ದಾರುಣವಾಗಿ ಸಾವನ್ನಪ್ಪಿದ್ದಾರೆ. ತಾಯಿ ಸೌಂದರ್ಯ ಹಾಗೂ ಮಗಳು ಲಿಯಾ ಸಾವನ್ನಪ್ಪಿದ ದುರ್ದೈವಿಗಳು. ಭಾನುವಾರ ಬೆಳಗ್ಗಿನ ಜಾವ 5 ಗಂಟೆ ಸುಮಾರಿಗೆ ಈ ದುರ್ಘಟನೆ ನಡೆದಿದೆ. ನೆಲದಲ್ಲಿ ಬಿದ್ದಿದ್ದ ವಿದ್ಯುತ್ ತಂತಿ ಕಾಣಿಸದೇ ತುಳಿದ ಕಾರಣ ವಿದ್ಯುತ್ ಪ್ರವಹಿಸಿ ಇಬ್ಬರು ಸಾವನ್ನಪ್ಪಿದ್ದಾರೆ. ದೀಪಾವಳಿ ಹಬ್ಬಕ್ಕೆ ಚೆನ್ನೈಗೆ ಹೋಗಿದ್ದ ಸೌಂದರ್ಯ, ಪತಿ ಸಂತೋಷ್ ಹಾಗೂ 9 ತಿಂಗಳ ಕಂದಮ್ಮ ಲಿಯಾ ಭಾನುವಾರ ಮುಂಜಾನೆ ಬೆಂಗಳೂರಿಗೆ ವಾಪಸ್ಸಾಗುತ್ತಿದ್ದ ವೇಳೆ ದುರ್ಘಟನೆ ನಡೆದಿದೆ. ದಾರಿಯಲ್ಲಿ ಬಿದ್ದಿದ್ದ ವಿದ್ಯುತ್ ತಂತಿಯನ್ನು ಗಮನಿಸದೇ ಸೌಂದರ್ಯ ಅದನ್ನು ತುಳಿದಿದ್ದರು. ಈ ವೇಳೆ ಪತಿ ಸಂತೋಷ್ ಕೈಗೆ ವಿದ್ಯುತ್ ಶಾಕ್ ಹೊಡೆದು ಅದೃಷ್ಟವಶಾತ್ ಅವರು ಪಕ್ಕಕ್ಕೆ ಬಿದ್ದಿದ್ದರು. ಆದರೆ ಪತಿ ಎದುರೇ ಪತ್ನಿ ಹಾಗೂ ಕಂದಮ್ಮ ವಿದ್ಯುತ್ ಶಾಕ್‌ಗೆ ಸುಟ್ಟು ಕರಕಲಾಗಿದ್ದಾರೆ.

**ಕರ್ನಾಟಕ ಸರ್ಕಾರ**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹುಕ್ಕೇರಿ**

**ಸಂಖ್ಯೆ:ಶಿಅಯೋಹು/ಬಾಮೂ.ಗ್ರೂಪ್./ಸಿ.ಸೇ/ಟೆಂ.ಪ್ರ/2023-24 ದಿನಾಂಕ:16/11/2023**

**"ಟೆಂಡರ್ ಪ್ರಕಟಣೆ"**

2023-24 ನೇ ಸಾಲಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹುಕ್ಕೇರಿ ರವರ ಕಾರ್ಯಾಲಯದಲ್ಲಿಯ ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006ರಡಿ ಕಂಪ್ಯೂಟರ್ ಆಪರೇಟರ ಹಾಗೂ ಮೆಸೆಂಜರ ಸಿಬ್ಬಂದಿ ಸೇವೆಯನ್ನು ಬಾಹ್ಯ ಮೂಲ ಸಂಸ್ಥೆಯ ಮುಖಾಂತರ ಪಡೆಯಲು, ಬಾಹ್ಯ ಮೂಲ ಸಂಸ್ಥೆಯ ಆಯ್ಕೆಗಾಗಿ ಟೆಂಡರ್ ಪ್ರಕ್ರೀಯೆ ನಡೆಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ 1999 ಮತ್ತು 2005 ರ ಅಡಿಯಲ್ಲಿ ಟೆಂಡರ ಕರೆಯಲಾಗಿದೆ.

1:ಟೆಂಡರ್ ಪ್ರಕಟಣೆ ದಿನಾಂಕ:17/11/2023, 1:ಟೆಂಡರ ಅರ್ಜಿ ವಿತರಿಸುವ ಸ್ಥಳ:ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ತಹಶೀಲ್ದಾರರ ಕಛೇರಿ ಸಭಾ ಭವನ ಹುಕ್ಕೇರಿ ಜಿಲ್ಲಾ:ಬೆಳಗಾವಿ, 2:ಭರ್ತಿ ಮಾಡಿದ ಟೆಂಡರ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ:18/12/2023 ರಂದು ಕಛೇರಿ ಅವಧಿಯೊಳಗೆ. 3:ತಾಂತ್ರಿಕ ಬಿಡ್ ಮತ್ತು ಆರ್ಥಿಕ ಬಿಡ್‌ಗಳನ್ನು (ಲಕೋಟೆ) ತೆರೆಯುವ ಸ್ಥಳ ಮತ್ತು ದಿನಾಂಕ:ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ತಹಶೀಲ್ದಾರರ ಕಛೇರಿ ಸಭಾ ಭವನ ಹುಕ್ಕೇರಿ ಜಿಲ್ಲಾ:ಬೆಳಗಾವಿ ದಿನಾಂಕ:19/12/2023 ರಂದು ಮಧ್ಯಾಹ್ನ 3=00 ಘಂಟೆಗೆ, 4:ಟೆಂಡರಗೆ ಇಟ್ಟ ಅಂದಾಜು ಮೊತ್ತ: 478080.96=00, 5:ಟೆಂಡರ್ ನೊಂದಿಗೆ ಪಾವತಿಸಬೇಕಾದ ಇ.ಎಮ್.ಡಿ.ಮೊತ್ತ :12000=00.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹುಕ್ಕೇರಿ ರವರ ಕಾರ್ಯಾಲಯ ತಹಶೀಲ್ದಾರರ ಕಛೇರಿ ಸಭಾ ಭವನ ಹುಕ್ಕೇರಿ ವೇಳೆಯಲ್ಲಿ ಸಂಪರ್ಕಿಸುವುದು. ದೂರವಾಣಿ ಸಂಖ್ಯೆ : 08333-265099

**ಸಹಿ/-ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು**
**ಹುಕ್ಕೇರಿ**

DIPR/BGM/RO-NO-639/MCA/2023-24

## ಭಗವದ್ಗೀತೆ ಅಭಿಯಾನಕ್ಕೆ ವಿಧ್ಯುಕ್ತ ಚಾಲನೆ

# ದೇಶದ ಪರಂಪರೆಯ ಅಭಿಯಾನ: ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಸ್ವಸ್ಥವಾದ ಮನಸ್ಸಿನ ತಳಹದಿಯ ಮೇಲೆ ವ್ಯಕ್ತಿತ್ವ ವಿಕಸನ, ನೈತಿಕತೆಯ ಪುನರುತ್ಥಾನ, ಸಾಮಾಜಿಕ ಸಾಮರಸ್ಯ ಮತ್ತು ರಾಷ್ಟ್ರೀಯ ಭಾವೈಕ್ಯತೆಯೆಂಬ ನಾಲ್ಕು ಸ್ಥಂಭಗಳನ್ನು ನಿರ್ಮಿಸಿ ಅದರ ಮೇಲೆ ಆದರ್ಶ ಸಮಾಜವೆಂಬ ಭವನ ನಿರ್ಮಿಸುವುದು ಭವದ್ಗೀತಾ ಅಭಿಯಾನದ ಉದ್ದೇಶವಾಗಿದೆ ಎಂದು ಸ್ವರ್ಣವಲ್ಲೀ ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ನುಡಿದರು.

ನಗರದ ಸಂತಮೀರಾ ಶಾಲೆಯ ಮಾಧವ ಸಭಾಗೃಹದಲ್ಲಿ ಮಂಗಳವಾರ ರಾಜ್ಯ ಮಟ್ಟದ ಭವದ್ಗೀತಾ ಅಭಿಯಾನದ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು. ಭಗವದ್ಗೀತೆ ಸಮಾಜದಲ್ಲಿ ಹೆಚ್ಚಾಗಿ ಧರ್ಮಗ್ರಂಥವೆಂದು ಪರಿಚಯವಾಗಿದೆ. ಆದರೆ ವಾಸ್ತವದಲ್ಲಿ ಭಗವದ್ಗೀತೆ ಚಿತ್ತಸ್ವಾಸ್ಥ್ಯದ ಗ್ರಂಥವೂ ಆಗಿದೆ. ಪ್ರಾಚೀನ ಭಾರತದಲ್ಲಿ ಯೋಗವು ಚಿತ್ತ ಸ್ವಾಸ್ಥ್ಯದ ಉಪಾಯವಾಗಿತ್ತು. ಈ ಯೋಗವನ್ನು ಭಗವದ್ಗೀತೆ ಹೇಳುತ್ತದೆ ಎಂದರು.

ಭಗವದ್ಗೀತೆಯಲ್ಲಿ ಕರ್ಮ ಯೋಗ, ಜ್ಞಾನ ಯೋಗ, ಭಕ್ತಿಯೋಗ ಮತ್ತು ಧ್ಯಾನ ಯೋಗವು ಸಂಪೂರ್ಣವಾಗಿ ಅಡಕವಾಗಿದೆ. ಈ ನಾಲ್ಕು ಯೋಗಗಳ ಮೂಲಕ ಭಗವದ್ಗೀತೆ ಮನಸ್ಸಿನ ಸ್ವಾಸ್ಥ್ಯವನ್ನು ಕಾಪಾಡುವ ಸಂಸ್ಕಾರವನ್ನು ಕೊಡುತ್ತದೆ ಎಂದರು.

ಮನಸ್ಸು ಮತ್ತು ವ್ಯಕ್ತಿತ್ವದ ದೋಷದಿಂದ ಅನೇಕ ದೈಹಿಕ ಹಾಗೂ ಮಾನಸಿಕ ರೋಗಗಳು ಉಂಟಾಗುತ್ತಿವೆ. ವ್ಯಕ್ತಿತ್ವ ವಿಕಸನದ ಮೂಲಕ ಮನಸ್ಸು ಅರಳಬೇಕು. ದೇಶದೆಲ್ಲೆಡೆ ಅಪರಾಧ ಪ್ರಕರಣಗಳು ಹೆಚ್ಚುತ್ತಿವೆ. ಆಧ್ಯಾತ್ಮ ಶಕ್ತಿಯಿಲ್ಲದೆ ನೈತಿಕತೆ ಇಲ್ಲ, ಹಾಗಾಗಿ ಜನರಲ್ಲಿ ಆಧ್ಯಾತ್ಮಿಕ ಶಕ್ತಿಯನ್ನು ತುಂಬಿ ನೈತಿಕತೆಯನ್ನು ಮೇಲೆತ್ತಬೇಕು.

ಭಾಷೆ, ಧರ್ಮ, ಜಾತಿ, ಮತ, ಪಂಥಗಳಲ್ಲಿ ಒಡೆದು ಹೋಗುತ್ತಿರುವ ಸಮಾಜವನ್ನು ಒಗ್ಗೂಡಿಸಲು ಭಗವದ್ಗೀತೆ ಸಹಕಾರಿಯಾಗಿದೆ. ರಾಷ್ಟ್ರೀಯ ಭಾವೈಕ್ಯತೆಗೆ ಸವಾಲಾಗುವ ಸಮಸ್ಯೆಗಳು ಉದ್ಭವವಾಗುತ್ತಲೇ ಇರುವುದು ಕಳವಳಕಾರಿ. ಸುಶಿಕ್ಷಿತರು ಸಹ ಹಿಂಸಾವಾದಕ್ಕೆ ತಿರುಗುತ್ತಿರುವುದು ಕಂಡು ಬರುತ್ತಿದೆ. ಹಾಗಾಗಿ ಶಿಕ್ಷಣದಲ್ಲಿ ಸಂಸ್ಕಾರವನ್ನು ತುಂಬಲು ಭಗವದ್ಗೀತೆ ಸಹಕಾರಿಯಾಗುತ್ತದೆ ಎಂದರು.

**ಡಿ.23ರಂದು ಮಹಾಸಮರ್ಪಣೆ**

2007ರಲ್ಲಿ ಭಗವದ್ಗೀತಾ ಅಭಿಯಾನ ಪ್ರಾರಂಭಗೊಂಡಿದ್ದು ಪ್ರತಿ ವರ್ಷ ಬೇರೆ ಬೇರೆ ಜಿಲ್ಲೆಗಳನ್ನು ಕೇಂದ್ರವಾಗಿರಿಸಿಕೊಂಡು ರಾಜ್ಯಾದ್ಯಂತ ನಡೆಯುತ್ತ ಬರುತ್ತಿದೆ. ಈ ಬಾರಿ ಬೆಳಗಾವಿ ನಗರ ಮತ್ತು ವಿವಿಧ ತಾಲೂಕುಗಳು ಸೇರಿ ಒಂದು ಸಾವಿರಕ್ಕೂ ಹೆಚ್ಚು ಪ್ರವಚನಗಳು ನಡೆಯಲಿವೆ. ಡಿ.22ಕ್ಕೆ ಬೆಳಗಾವಿ ಉತ್ತರ ಮತ್ತು ದಕ್ಷಿಣ ಭಾಗದಲ್ಲಿ ಪ್ರತ್ಯೇಕವಾಗಿ ಸಮಗ್ರ ಗೀತಾ ಪಾರಾಯಣ ನಡೆಯಲಿದೆ. ಡಿ.23ರಂದು ಲಿಂಗರಾಜ ಕಾಲೇಜು ಮೈದಾನಲ್ಲಿ ಸಮರ್ಪಣಾ ಕಾರ್ಯಕ್ರಮ ಜರುಗಲಿದೆ ಎಂದು ಶ್ರೀಗಳು ವಿವರಿಸಿದರು.

**ಪರಂಪರೆಯ ಪ್ರತೀಕಪರಂಪರೆಯ ಪ್ರತೀಕ**

ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡಿದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ನಮ್ಮ ದೇಶದ ಇತಿಹಾಸ 5 ಸಾವಿರ ವರ್ಷಕ್ಕೂ ಹಿಂದಿನದು ಎಂದು ಭಾಷಣದಲ್ಲಿ ಹೇಳುತ್ತೇವೆ. ಆದರೆ ಅದಕ್ಕೂ ಮೊದಲಿಂದಲೂ ಭಾರತದಲ್ಲಿ ಭವ್ಯವಾದ ಪರಂಪರೆ ಇತ್ತು. ದೇಶದ ಪರಂಪರೆಯನ್ನು ಇಡೀ ವಿಶ್ವವೇ ಮೆಚ್ಚಿದೆ ಎಂದರು.

ಭಗವದ್ಗೀತೆ ದೇಶದ ಭವ್ಯ ಪರಂಪರೆಯನ್ನು ಎತ್ತಿ ಹಿಡಿಯುವ ಮಹಾನ್ ಗ್ರಂಥವಾಗಿದೆ. ಹಾಗಾಗಿ ಭಗವದ್ಗೀತೆಯ ಅಭಿಯಾನವು ದೇಶದ ಪರಂಪರೆಯ ಅಭಿಯಾನವಾಗಿದೆ ಎಂದರು.

ಸ್ವರ್ಣವಲ್ಲೀ ಶ್ರೀಗಳು ಕಳೆದ 17 ವರ್ಷಗಳಿಂದ ಈ ಅಭಿಯಾನವನ್ನು ನಡೆಸುವ ಮೂಲಕ ಭಗವದ್ಗೀತೆಯ ಮೌಲ್ಯವನ್ನು ಜನ ಜೀವನದಲ್ಲಿ ಅಳವಡಿಸಿಕೊಳ್ಳಲು ನೆರವಾಗುತ್ತಿರುವುದು ಶ್ಲಾಘನೀಯ. ದೇಶದ ಭಗವದ್ಗೀತೆಯ ಪಠಣವೇ ಜನರನ್ನು ಮಂತ್ರಮುಗ್ಧಗೊಳಿಸುತ್ತದೆ. ಶಾಲಾ ವಿದ್ಯಾರ್ಥಿಗಳು ಅತ್ಯಂತ ಸ್ಫುಟವಾಗಿ ಭಗವದ್ಗೀತೆಯನ್ನು ಪಠಿಸುವುದು ನೋಡಿದಾಗ ಅತ್ಯಂತ ಸಂತಸವಾಗುತ್ತದೆ. ಈ ಮಕ್ಕಳನ್ನು ನೋಡಿದಾಗ ದೇಶಕ್ಕೆ ಭವಿಷ್ಯವಿದೆ ಎಂಬ ಭರವಸೆ ಮೂಡುತ್ತದೆ ಎಂದರು.

**ಬದುಕು ಅರಿಯುವ ಗ್ರಂಥ**

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜನ ಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷ ಅರವಿಂದರಾವ್ ಜಿ. ದೇಶಪಾಂಡೆ ಮಾತನಾಡಿ, ಭಗವದ್ಗೀತೆಯನ್ನು ಮಹಾಭಾರತ ಯುದ್ಧದ ಸಂದರ್ಭದಲ್ಲಿ ಶ್ರೀ ಕೃಷ್ಣ ಅರ್ಜುನನಿಗೆ ಹೇಳುವ ಉಪದೇಶ. ಆದರೆ ಇಂದು ಪ್ರತಿ ಮನುಷ್ಯನ ಮನಸ್ಸಿನಲ್ಲೂ ಯುದ್ಧ ನಡೆದಿದೆ. ಇದಕ್ಕೆ ಭಗವದ್ಗೀತೆಯಲ್ಲಿ ಉತ್ತರ ಸಿಗುತ್ತದೆ ಎಂದರು. ಜಗತ್ತಿನ ಅತಿ ಹೆಚ್ಚು ಭಾಷೆಗೆ ತರ್ಜುಮೆಯಾದ ಮತ್ತು ಅತಿ ಹೆಚ್ಚು ವಾಖ್ಯಾನವನ್ನು ಬರೆಯಲ್ಪಟ್ಟ ಏಕೈಕ ಗ್ರಂಥ ಭಗವದ್ಗೀತೆ ಎಂಬುದು ಹೆಮ್ಮೆಯ ಸಂಗತಿ ಎಂದರು.

ಇಂದು ಯುರೋಪ್ ಸೇರಿದಂತೆ ಜಗತ್ತಿನ ಹಲವಾರು ದೇಶಗಳಲ್ಲಿ ಭಗವದ್ಗೀತೆಯನ್ನು ಶಿಕ್ಷಣದಲ್ಲಿ ಅಳವಡಿಸಲಾಗುತ್ತಿದೆ. ಮುಂದೊಂದು ದಿನ ಭಗವದ್ಗೀತೆ ಕಲಿಸಲು ನಮಗೆ ವಿದೇಶದಿಂದ ಶಿಕ್ಷಕರು ಬರುವ ದುರಂತ ಎದುರಾಗಬಾರದು. ನಮ್ಮಲ್ಲೂ ಶಿಕ್ಷಣದಲ್ಲಿ ಭಗವದ್ಗೀತೆಯನ್ನು ಅಳವಡಿಸಲು ಕ್ರಮವಾಗಬೇಕು ಎಂದರು.

ಆರ್ಷವಿದ್ಯಾ ಕೇಂದ್ರದ ಶ್ರೀ ಚಿತ್ಪ್ರಕಾಶಾನಂದ ಸ್ವಾಮೀಜಿ ಮಾತನಾಡಿ, ಭಗವದ್ಗೀತೆಯ ಅಧ್ಯಯನ ಜತೆಗೆ ಅದರ ಸಾರವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಕಾರ್ಯ ಆಗಬೇಕು ಎಂದರು. ಭಗವದ್ಗೀತೆಯ ಒಂದೊಂದು ಶ್ಲೋಕ ಕಿವಿಯಲ್ಲಿ ಬಿದ್ದರೆ ಕೋಟಿ ಯಜ್ಞದ ಪುಣ್ಯ ಲಭಿಸುತ್ತದೆ ಎಂದರು.

ನಿಡಸೋಸಿ ದುರದುಂಡೀಶ್ವರ ಸಿದ್ಧ ಸಂಸ್ಥಾನ ಮಠದ ಶ್ರೀ ನಿಜಲಿಂಗೇಶ್ವರ ಸ್ವಾಮೀಜಿ ಮಾತನಾಡಿ,ಭಗವದ್ಗೀತೆ ಎಂದರೆ ಶ್ರೀ ಕೃಷ್ಣನ ವ್ಯಕ್ತಿತ್ವ. ಶ್ರೀ ಕೃಷ್ಣ ಮತ್ತು ಭಗವದ್ಗೀತೆಯನ್ನು ಅರ್ಥ ಮಾಡಿಕೊಂಡರೆ ಸಮಾಜದ ಸಾಮರಸ್ಯ ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ಭಗವದ್ಗೀತೆಯ 10ನೇ ಅಧ್ಯಾಯವನ್ನು ಪಠಣ ಮಾಡಲಾಯಿತು. ಸೋಂದಾ ಶ್ರೀ ಸ್ವರ್ಣವಲ್ಲಿ ಮಠದ ಆಡಳಿತ ಮಂಡಳಿ ಅಧ್ಯಕ್ಷ ವಿಘ್ನೇಶ್ವರ ಎನ್. ಹೆಗಡೆ, ಶಿಕ್ಷಣ ತಜ್ಞ ಗೋಪಾಲ ಜಿನಗೌಡ ಉಪಸ್ಥಿತರಿದ್ದರು. ಗೀತಾ ಅಭಿಯಾನದ ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ ಸ್ವಾಗತಿಸಿದರು. ಸಂಚಾಲಕ ಸುಬ್ರಹ್ಮಣ್ಯ ಭಟ್ ನಿರೂಪಿಸಿದರು. ಕಾರ್ಯದರ್ಶಿ ಎಂ.ಕೆ. ಹೆಗಡೆ ಇತರರು ಇದ್ದರು.

**ಅರವಿಂದರಾವ್ ದೇಶಪಾಂಡೆ ನನ್ನ ಗುರು: ಲಕ್ಷ್ಮೀ ಹೆಬ್ಬಾಳಕರ್**

ಜನ ಕಲ್ಯಾಣ ಟ್ರಸ್ಟ್‌ನ ಅಧ್ಯಕ್ಷರಾದ ಅರವಿಂದರಾವ್ ದೇಶಪಾಂಡೆ ಅವರನ್ನು ನಾನು ಸದಾ ನನ್ನ ಗುರುಗಳನ್ನಾಗಿ ಸ್ವೀಕರಿಸಿದ್ದೇನೆ. ಅವರನ್ನು ಇದುವರೆಗೂ ಭೇಟಿಯಾಗಿರಲಿಲ್ಲ, ಮಾತಾಡಿರಲಿಲ್ಲ. ಏಕಲವ್ಯನು ದ್ರೋಣಾಚಾರ್ಯರರನ್ನು ತನ್ನ ಗುರುವನ್ನಾಗಿ ಸ್ವೀಕರಿಸಿದ ಮಾದರಿಯಲ್ಲಿ ನಾನು ಅರವಿಂದರಾವ್ ದೇಶಪಾಂಡೆ ಅವರನ್ನು ಆರಾಧನಾ ಭಾವದಿಂದ ನೋಡುತ್ತ ಬಂದಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

## ನ.29 ರಂದು ಶ್ರೀ ಡಿ. ವ್ಹಿ. ಹಾಲಭಾವಿ ರಾಷ್ಟ್ರೀಯ ಪ್ರಶಸ್ತಿ ಪ್ರಧಾನ ಸಮಾರಂಭ

ಧಾರವಾಡ: ಚಿತ್ರಕಲಾ ಶಿಲ್ಪಿ ಶ್ರೀ ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಶ್ರೀ ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ನವೆಂಬರ್ 29 ರ ಸಂಜೆ 5-30 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಹ್ಲಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಘನ ಉಪಸ್ಥಿತರಿರುವರು. ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ ಅವರು ವಿಶೇಷ ಅತಿಥಿಗಳಾಗಿ ಆಗಮಿಸುವರು. ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರು ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಶಾಸಕರಾದ ವಿನಯ ಕುಲಕರ್ಣಿ, ಅಬ್ಬಯ್ಯ ಪ್ರಸಾದ, ಎನ್.ಎಚ್ ಕೋನರಡ್ಡಿ, ಎಸ್.ವ್ಹಿ ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭಾರದ್ವಾಡ ಅವರು ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಕೇಂದ್ರ ಸಾಹಿತ್ಯ ಅಕಾಡೆಮಿ ಸದಸ್ಯ, ಕನ್ನಡ ಸಾಹಿತ್ಯ ಪರಿಷತ್ತು ನಿಕಟಪೂರ್ವ ಅಧ್ಯಕ್ಷ ನಾಡೋಜ ಡಾ. ಮನು ಬಳಿಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಬಸವರಾಜ ಹೂಗಾರ, ಇಂಡೋ ಪೇರ್ಚುಗೀಸ್ ಸಾಹಿತ್ಯ ಪ್ರತಿಗಣ್ಠನ ನಿರ್ದೇಶಕ ಡಾ. ಅರವಿಂದ ಯಾಳಗಿ, ಹಿರಿಯ ಚಿತ್ರ ಕಲಾವಿದ ಈಶ್ವರ ಜೋಶಿ ಉಪಸ್ಥಿತರಿರುವರು.

ಪ್ರಶಸ್ತಿಗೆ ಬಾಜನರಾಗಿರುವ ಕಲಾವಿದರಿಂದ ಚಿತ್ರಕಲಾ ಪ್ರಾತ್ಯಕ್ಷಿಕೆಯನ್ನು ನವೆಂಬರ್ 28 ರಂದು ಸರಕಾರಿ ಚಿತ್ರಕಲಾ ಮಹಾವಿದ್ಯಾಲಯದ ಆರ್ಟ್ ಗ್ಯಾಲರಿಯಲ್ಲಿ ಪ್ರದರ್ಶಿಸಲಾಗುವುದು ಎಂದು ಟ್ರಸ್ಟ್ ಪ್ರಕಟಣೆ ತಿಳಿಸಿದೆ.

## ಹಿಂಗಾರು ಹಂಗಾಮಿನ ಕೃಷಿ ಪ್ರಶಸ್ತಿ ಆಯ್ಕೆಗೆ ಅರ್ಜಿಗಳ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲೆಯ ಕೃಷಿ ವಲಯದಲ್ಲಿ ಉತ್ಪಾದಕತೆ ಹೆಚ್ಚಿಸಲು ಹಾಗೂ ರೈತರಲ್ಲಿ ಸ್ಪರ್ಧಾ ಮನೋಭಾವ ಬೆಳೆಸಲು ಕೃಷಿ ಇಲಾಖೆಯಿಂದ 2023-24 ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ರಾಜ್ಯ, ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ನಿಗದಿಪಡಿಸಿದ ವಿವಿಧ ಬೆಳೆಗಳಲ್ಲಿ ಬೆಳೆ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಆಸಕ್ತಿಯುಳ್ಳ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ ಸಂಬಂಧಿಸಿದ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯಕ್ಕೆ ನವೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಅರ್ಜಿ ನಮೂನೆ, ಪ್ರವೇಶ ಶುಲ್ಕ ಭರಣಾ ಮಾಡುವುದು. ಬೆಳೆ ಕಟಾವು ಮಾಡುವ ವಿಧಾನ, ಸ್ಪರ್ಧಾತ್ಮಕ ಇಳುವರಿಯ ಮಾಹಿತಿ ಇತ್ಯಾದಿಗಳ ಬಗ್ಗೆ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು.

ಬೆಳೆ ಸ್ಪರ್ಧೆಯಲ್ಲಿ ಭಾಗವಹಿಸಲು ಸಾಮಾನ್ಯ ವರ್ಗದ ರೈತರಿಗೆ ರೂ.100/-ಶುಲ್ಕ ಇದ್ದು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ರೂ.25/- ಶುಲ್ಕವಿದೆ.

ರಾಜ್ಯ ಮಟ್ಟದ ಬೆಳೆ ಸ್ಪರ್ಧೆಗೆ ಹಿಂಗಾರು ಹಂಗಾಮಿಗೆ ಜೋಳ (ಮಳೆ ಆಶ್ರಿತ) ಮತ್ತು ಕಡಲೆ (ಮಳೆ ಆಶ್ರಿತ) ಬೆಳೆಗಳನ್ನು ನಿಗದಿಪಡಿಸಲಾಗಿದೆ. ಜಿಲ್ಲಾ ಮಟ್ಟದ ಬೆಳೆ ಸ್ಪರ್ಧೆಗೆ ಹಿಂಗಾರು ಹಂಗಾಮಿಗೆ ಕಡಲೆ (ಮಳೆ ಆಶ್ರಿತ) ನಿಗದಿ ಪಡಿಸಲಾಗಿದೆ.

ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಸಂಬಂದಿಸಿದಂತೆ ಧಾರವಾಡ, ಹುಬ್ಬಳ್ಳಿ, ಹುಬ್ಬಳ್ಳಿನಗರ, ನವಲಗುಂದ, ಅಣ್ಣಿಗೇರಿ ಹಾಗೂ ಕುಂದಗೋಳ ತಾಲ್ಲೂಕುಗಳಿಗೆ ಕಡಲೆ (ಮಳೆ ಆಶ್ರಿತ) ಬೆಳೆ ನಿಗದಿಪಡಿಸಲಾಗಿದೆ. ಈ ಸ್ಪರ್ಧೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. 2023-24ನೇ ಸಾಲಿನಲ್ಲಿಯೂ ಸಹ ಕೃಷಿಯಲ್ಲಿ ರೈತ ಮಹಿಳೆಯರನ್ನು ಪ್ರೇತ್ಸಾಹಿಸುವ ಹಾಗೂ ಇತರೆ ಮಹಿಳೆಯರನ್ನು ಕೃಷಿಯತ್ತ ಆಕರ್ಷಿಸಲು ಪ್ರತ್ಯೇಕವಾಗಿ ಮಹಿಳೆಯರಿಗೆ ಕೃಷಿ ಪ್ರಶಸ್ತಿಯನ್ನು ನೀಡಲು ಸರ್ಕಾರವು ಅನುಮೋದನೆ ನೀಡಿದೆ. ಆದ್ದರಿಂದ ಮಹಿಳೆಯರು ಹಿಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸಬಹುದು.

ಆಸಕ್ತ ರೈತರು ಹಾಗೂ ರೈತ ಮಹಿಳೆಯರು ನವೆಂಬರ್ 30 ರೊಳಗಾಗಿ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರಿಗೆ ಅರ್ಜಿ ಸಲ್ಲಿಸಬೇಕೆಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿರಿಯಾನಿ ತಿಂದು 17 ಜನರು ಅಸ್ವಸ್ಥ

ಚಿಕ್ಕಮಗಳೂರು: ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಮರವಂಜಿ ಗ್ರಾಮದ ಮನೆಯೊಂದರಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿರಿಯಾನಿ ತಿಂದ 17 ಜನರು ಅಸ್ವಸ್ಥಗೊಂಡಿದ್ದಾರೆ. ಕಡೂರು ಆಸ್ಪತ್ರೆಯಲ್ಲಿ ಎಲ್ಲರೂ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮನೆಯಲ್ಲಿ ನಡೆದ ಕಾರ್ಯಕ್ರಮಕ್ಕೆ ಆಗಮಿಸಿದ್ದ ಗ್ರಾಮಸ್ಥರು ಸೋಮವಾರ ವಿಷಪೂರಿತವಾದ ಮಾಂಸಹಾರ ಸೇವಿಸಿ ಅಸ್ವಸ್ಥರಾಗಿದ್ದಾರೆ. ಭಾನುವಾರ ನಡೆದ ಕಾರ್ಯಕ್ರಮದಲ್ಲಿ ತಯಾರಿಸಿದ್ದ ಬಿರಿಯಾನಿಯನ್ನು ಸೋಮವಾರ ಕುಟುಂಬಸ್ಥರು ಹಾಗೂ ಕೆಲ ಗ್ರಾಮಸ್ಥರು ಸೇವಿಸಿದ್ದಾರೆ. ಬಳಿಕ 17 ಜನರು ಅಸ್ವಸ್ಥರಾಗಿದ್ದಾರೆ.

ಬಿರಿಯಾನಿ ಸೇವಿಸಿದ ಬಳಿಕ ಕೆಲವರಿಗೆ ವಾಂತಿ, ಭೇಧಿ ಕಾಣಿಸಿಕೊಂಡಿದೆ. ಕೆಲವರು ತೀವ್ರವಾಗಿ ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಗ್ರಾಮಸ್ಥರು ಆಂಬ್ಯುಲೆನ್ಸ್ ಸಹಾಯದಿಂದ ಎಲ್ಲರನ್ನೂ ಕಡೂರು ಸಾರ್ವಜನಿಕ ಆಸ್ಪತ್ರೆಗೆ ಕರೆತಂದಿದ್ದಾರೆ. ಆಸ್ಪತ್ರೆಯಲ್ಲಿ ಎಲ್ಲರಿಗೂ ಚಿಕಿತ್ಸೆ ನೀಡಲಾಗಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ.

ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಎಸ್. ಎನ್. ಉಮೇಶ್ ಹಾಗೂ ಇತರ ಸಿಬ್ಬಂದಿ ಸೂಕ್ತ ತಪಾಸಣೆ ನಡೆಸಿ ಪ್ರಾಥಮಿಕ ಚಿಕಿತ್ಸೆ ನೀಡಿ ಆಸ್ಪತ್ರೆಯ ಮೂರು ಕೊಠಡಿಯಲ್ಲಿ ಎಲ್ಲರನ್ನೂ ದಾಖಲಿಸಿಕೊಂಡು ಚಿಕಿತ್ಸೆ ಆರಂಭಿಸಿದರು.

ಭಾನುವಾರ ತಯಾರಿಸಿದ ಮಾಂಸಹಾರ ಸೋಮವಾರಕ್ಕೆ ವಿಷಪೂರಿತಗೊಂಡಿದ್ದು, ಅದನ್ನೇ ಗ್ರಾಮಸ್ಥರು ಸೇವಿಸಿದ್ದ ಹಿನ್ನೆಲೆಯಲ್ಲಿ ವಾಂತಿ, ಭೇದಿ ಕಾಣಿಸಿಕೊಂಡಿದೆ. ಕೂಡಲೇ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದ್ದು, ಪ್ರಾಣಾಪಾಯಕ್ಕೆ ಯಾವುದೇ ತೊಂದರೆ ಇಲ್ಲ ಎಂದು ಡಾ. ಎಸ್. ಎನ್. ಉಮೇಶ್ ಹೇಳಿದ್ದಾರೆ. ಆಸ್ಪತ್ರೆಗೆ ದಾಖಲಾದ ಗ್ರಾಮಸ್ಥರ ಪೈಕಿ 8 ಪುರುಷರು ಹಾಗೂ ಮಕ್ಕಳು ಒಳಗೊಂಡಂತೆ 9 ಜನ ಮಹಿಳೆಯರು ಇದ್ದಾರೆ. ಚಿಕಿತ್ಸೆಯಿಂದ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಡಾ. ಎಸ್. ಎನ್. ಉಮೇಶ್ ತಿಳಿಸಿದ್ದಾರೆ.



ವಿಷಯ ತಿಳಿದ ಕಡೂರು ಶಾಸಕ ಕೆ. ಎಸ್. ಆನಂದ್ ಆಸ್ಪತ್ರೆಗೆ ಭೇಟಿ ನೀಡಿ ಅಸ್ವಸ್ಥಗೊಂಡ ರೋಗಿಗಳ ಆರೋಗ್ಯಗ ಬಗ್ಗೆ ಆಸ್ಪತ್ರೆಯ ವೈದ್ಯರಿಂದ ಮಾಹಿತಿ ಪಡೆದುಕೊಂಡರು. ಅಸ್ವಸ್ಥಗೊಂಡು ದಾಖಲಾದ ರೋಗಿಗಳ ಯೋಗಕ್ಷೇಮ ವಿಚಾರಿಸಿದರು.



## ನಾಮಕರಣದಲ್ಲಿ ಹೆಜ್ಜೇನು ದಾಳಿ: ಓರ್ವ ಸಾವು, ಹಲವರಿಗೆ ಗಾಯ

ತುಮಕೂರು: ನಾಮಕರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡವರ ಮೇಲೆ ಹೆಜ್ಜೇನು ದಾಳಿ ನಡೆಸಿದ್ದು, ಓರ್ವ ಸಾವನ್ನಪ್ಪಿ 20ಕ್ಕೂ ಅಧಿಕ ಮಂದಿ ಗಾಯಗೊಂಡಿರುವ ಘಟನೆ ಗುಬ್ಬಿ ತಾಲ್ಲೂಕಿನಲ್ಲಿ ಸೋಮವಾರ ನಡೆದಿದೆ.

ಗುಬ್ಬಿ ತಾಲ್ಲೂಕು ಲಕ್ಕೇನಹಳ್ಳಿ ಗೇಟ್ ಬಳಿ ಘಟನೆ ಸಂಭವಿಸಿದ್ದು, ವೀರಭದ್ರಯ್ಯ(47) ಹೆಜ್ಜೇನು ದಾಳಿಯಿಂದ ಸಾವನ್ನಪ್ಪಿದ್ದಾರೆ. ಉಳಿದಂತೆ 20ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದು, ಗಾಯಾಳುಗಳನ್ನು ಗುಬ್ಬಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಲಕ್ಕೇನಹಳ್ಳಿ ಗೇಟ್ ಗ್ರಾಮದ ರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ನಾಮಕಾರಣ ಕಾರ್ಯಕ್ರಮ ನಡೆಯುತ್ತಿತ್ತು. ಈ ವೇಳೆ ಏಕಾಏಕಿ ಹೆಜ್ಜೇನು ದಾಳಿ ನಡೆಸಿದೆ. ಗುಬ್ಬಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

# ರಾಜ್ಯದ 9 ಲಕ್ಷ ಕಾರ್ಮಿಕ ಮಕ್ಕಳಿಗೆ ಸ್ಕಾಲರ್ಶಿಪ್: ಸಚಿವ ಸಂತೋಷ್ ಲಾಡ್

ಉಡುಪಿ: ಕಾರ್ಮಿಕ ಕಲ್ಯಾಣ ಮಂಡಳಿಯ ಮೂಲಕ ರಾಜ್ಯದ ಕಾರ್ಮಿಕ ಮಕ್ಕಳಿಗೆ ವಿತರಿಸಲಾಗುವ ಸ್ಕಾಲರ್ ಶಿಪ್‌ಗೆ ಈ ಬಾರಿ 13 ಲಕ್ಷ ಅರ್ಜಿಗಳು ಬಂದಿದ್ದು, ಇವುಗಳಲ್ಲಿ 9 ಲಕ್ಷ ವಿದ್ಯಾರ್ಥಿಗಳಿಗೆ ಸ್ಕಾಲರ್ಶಿಪ್‌ನ್ನು ವಿತರಿಸುತಿದ್ದೇವೆ ಎಂದು ರಾಜ್ಯದ ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ.

ಮಣಿಪಾಲದಲ್ಲಿರುವ ಜಿಪಂನ ಡಾ.ವಿ.ಎಸ್.ಆಚಾರ್ಯ ಸಭಾಂಗಣದಲ್ಲಿ ಸೋಮವಾರ ನಡೆದ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಕರೆದ ಸುದ್ದಿಗೋಷ್ಠಿಯಲ್ಲಿ ಇಲಾಖೆಯ ಮಾಹಿತಿಗಳನ್ನು ಪತ್ರಕರ್ತ ರೊಂದಿಗೆ ಹಂಚಿಕೊಂಡರು.

ಬಿಜೆಪಿ ಅಧಿಕಾರದ ಅವಧಿಯಲ್ಲಿ ರಾಜ್ಯದ ಮೂರು ಲಕ್ಷ ವಿದ್ಯಾರ್ಥಿಗಳಿಗೆ ಮಾತ್ರ ವಿದ್ಯಾರ್ಥಿ ವೇತನ ನೀಡಲಾಗಿತ್ತು. ಕಾಂಗ್ರೆಸ್ ಆಡಳಿತಕ್ಕೆ ಬಂದ ಬಳಿಕ ಈಗ ಅದನ್ನು 9 ಲಕ್ಷಕ್ಕೆ ಏರಿಸಲಾಗಿದೆ. ಅಲ್ಲದೇ ಹಿಂದಿನ ಸರಕಾರ ಯಾವುದೇ ಸರಿಯಾದ ಕಾರಣಗಳಿಲ್ಲದೇ ಅವೈಜ್ಞಾನಿಕವಾಗಿ ಏರಿಸಿದ ಮೊತ್ತವನ್ನು ನಿರ್ದಿಷ್ಟ ಮಟ್ಟದಲ್ಲಿರಿಸಿದ್ದೇವೆ ಎಂದರು.



ಬಿಜೆಪಿ ಆಡಳಿತದಲ್ಲಿ ಕೋವಿಡ್ ಸಂದರ್ಭದ ಕಿಟ್ ವಿತರಣೆಯಲ್ಲಿ ಕಾರ್ಮಿಕ ನಿಧಿಯ ದುರ್ಬಳಕೆಯ ಆರೋಪ ಕೇಳಿ ಬಂದಿದ್ದು, ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿದ್ದ 13,000 ಕೋಟಿ ರೂ.ನಿಧಿ ಏಕಾಏಕಿ 6,500 ಕೋಟಿ ರೂ.ಗೆ ಇಳಿದಿತ್ತು. ಕೇವಲ 2,500ದಿಂದ 3000 ಕೋಟಿ ರೂ.ಮಾತ್ರ ಸೆಸ್ ಸಂಗ್ರಹವಾಗಿತ್ತು. ಅವೈಜ್ಞಾನಿಕವಾಗಿ 39 ಲಕ್ಷ ಕಾರ್ಡ್ ಗಳನ್ನು ಹೆಚ್ಚುವರಿಯಾಗಿ ಹಂಚಲಾಗಿತ್ತು. ಇದರಲ್ಲಿ ಸಾಕಷ್ಟು ನಕಲಿ ಕಾರ್ಡ್‌ಗಳ ಆರೋಪವೂ ಕೇಳಿಬಂದಿತ್ತು ಎಂದರು.

2008ರಿಂದ ನಿರ್ಮಿಸಿದ ಹೊಸ ಕಟ್ಟಡಗಳ ಜಿಯೋ ಮ್ಯಾಪಿಂಗ್ ಮೂಲಕ ಹೆಚ್ಚುವರಿಯಾಗಿ 3,000 ಕೋಟಿ ರೂ. ಸೆಸ್ ಸಂಗ್ರಹಿಸುವ ಗುರಿಯನ್ನು ಹಾಕಿಕೊಳ್ಳಲಾಗಿದೆ. ಜಿಯೋ ಮ್ಯಾಪಿಂಗ್ ನೆರವಿನಿಂದ ಕೇಂದ್ರ ಸಹಿತ ಕಟ್ಟಡ ನಿರ್ಮಾಣದಾರರು ನೀಡಬೇಕಾದ ಬಾಕಿ ಸೆಸ್ ವಸೂಲಿಗೂ ಕ್ರಮ ಕೈಗೊಳ್ಳಲಾಗುವುದು ಎಂದರು.

ದೇಶದಲ್ಲಿ ಶೇ.90ರಷ್ಟು ಹಾಗೂ ರಾಜ್ಯದಲ್ಲಿ ಶೇ.85ರಷ್ಟು ಅಸಂಘಟಿತ ಕಾರ್ಮಿಕರಿದ್ದು, ರಾಜ್ಯದಲ್ಲಿ ಸುಮಾರು 1.80 ಕೋಟಿ ಜನರು ಸಾಮಾಜಿಕ ಭದ್ರತೆಯಿಂದ ವಂಚಿತರಾಗಿ ಅಸಂಘಟಿತ ವಲಯದಲ್ಲಿದ್ದಾರೆ ಎಂದರು. ಇ -ಕಾಮರ್ಸ್‌ನಲ್ಲಿ 5 ಲಕ್ಷ, ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿ 45ರಿಂದ 50 ಲಕ್ಷ, ಸಿನಿಮಾರಂಗದಲ್ಲಿ 5 ಲಕ್ಷ, ಮನೆಗೆಲಸದಲ್ಲಿ 20 ಲಕ್ಷ ಮಂದಿ ತೊಡಗಿಸಿ ಕೊಂಡಿದ್ದು ಇವರೆಲ್ಲರೂ ಅಸಂಘಟಿತ ಕ್ಷೇತ್ರದಲ್ಲಿದ್ದಾರೆ.

ಗ್ಯಾರೇಜ್ ಕೆಲಸಗಾರರ ಸಹಿತ ವಾಣಿಜ್ಯ ವಾಹನ ಪರವಾನಗಿದಾರರು 35 ಲಕ್ಷ ಮಂದಿಯಿದ್ದು, ಇವರೆಲ್ಲರ ಅನುಕೂಲ ಕ್ಕಾಗಿ ಯೋಜನೆ ಯೊಂದನ್ನು ರೂಪಿಸಲಾಗುತ್ತಿದೆ.


ಕಾರ್ಮಿಕ ಇಲಾಖೆ ಸಂಗ್ರಹಿಸುತ್ತಿರುವ ಸೆಸ್ ಆದಾಯದಲ್ಲಿ 1.20 ಕೋಟಿಯಷ್ಟು ಅಸಂಘಟಿತ ಕಾರ್ಮಿಕರನ್ನು ಸಾಮಾಜಿಕ ಭದ್ರತೆ ಯೋಜನೆಗೊಳಪಡಿಸುವ ಗುರಿಯಿದೆ. ಸೆಸ್ ಆದಾಯ ಸಂಗ್ರಹ ಹೆಚ್ಚಿದರೆ ಮತ್ತಷ್ಟು ಜನರಿಗೆ ಸೌಲಭ್ಯ ಒದಗಿಸಲಾಗುವುದು. ಇವರಿಗೆ ಯುನಿವರ್ಸಲ್ ಕಾರ್ಡ್ ಕೊಡಲೂ ಉದ್ದೇಶಿಸಲಾಗಿದೆ ಎಂದರು.

ಇಎಸ್‌ಐ ಆಸ್ಪತ್ರೆಗೆ ಜಾಗ: ಉಡುಪಿ ಜಿಲ್ಲೆಗೆ ಮಂಜೂರಾಗಿರುವ ಇಎಸ್‌ಐ ಆಸ್ಪತ್ರೆಗಾಗಿ ಜಮೀನನ್ನು ಗುರುತಿಸಿದ್ದು, ಎಲ್ಲಾ ದಾಖಲೆಗಳ ಸಹಿತ ಮರು ಪ್ರಸ್ತಾವನೆಯನ್ನು ಕೇಂದ್ರ ಕಾರ್ಮಿಕ ಇಲಾಖೆಗೆ ಕಳುಹಿಸಲಾಗಿದೆ. ರಾಜ್ಯದಲ್ಲಿ ಇಎಸ್‌ಐ ಚಂದಾದಾರರಿಗೆ ರೆಫರಲ್ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ವಾರ್ಷಿಕ 44 ಕೋಟಿ ರೂ. ವ್ಯಯವಾಗುತ್ತಿದೆ. ರಾಜ್ಯದಲ್ಲಿ 19 ಆಸ್ಪತ್ರೆ ಹಾಗೂ ನಾಲ್ಕು ಮೆಡಿಕಲ್ ಕಾಲೇಜು ಆಸ್ಪತ್ರೆಗಳಿವೆ. ಇವುಗಳಿಗೆ ರಾಜ್ಯ ಸರಕಾರ 450 ಕೋಟಿ ರೂ.ನೀಡಿದೆ ಎಂದು ಸಂತೋಷ್ ಲಾಡ್ ತಿಳಿಸಿದರು.

## ನ.30 ರಂದು ಶ್ರೀ ಕನಕದಾಸರ ಜಯಂತಿ ಆಚರಣೆ

ಧಾರವಾಡ: ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ನ.21 ಬೆಳಿಗ್ಗೆ ಶ್ರೀ ಕನಕದಾಸರ ಜಯಂತಿ ಆಚರಣೆಯ ಕುರಿತು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶ್ರೀ ಕನಕದಾಸರ ಜಯಂತಿ ಆಚರಣೆಯನ್ನು ನ.30 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಭಾಭವನದಲ್ಲಿ ಆಚರಿಸಲು ನಿರ್ಧರಿಸಲಾಗಿದೆ. ಪ್ರತಿವರ್ಷದಂತೆ ಶ್ರೀ ಕನಕದಾಸ ಜಯಂತಿ ಆಚರಣೆಯನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಿ, ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯಲ್ಲಿ ಸಮುದಾಯಗಳ ಮುಖಂಡರಾದ ಡಾ.ಲೋಹಿತ ನಾಯ್ಕರ, ಪ್ರಕಾಶ ಉಡಿಗೇರಿ, ಬಸವರಾಜ ಕಟಿಗಿ, ಚಂದ್ರಕಲಾ ಕೋಟಬಾಗಿ, ರವಿ ಮಾಳಿಗೇರ, ಜೆ.ಬಿ.ಕಂಬಳಿ, ರವಿ ಐರಾಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಿಎಚ್‌ಡಿ ಪದವಿ ಪ್ರಧಾನ



ಬೆಳಗಾವಿ: ಇಲ್ಲಿನ ಕಾಕತೀಯ ಶ್ರೀಕಾಂತ ಮುಚ್ಚಂಡಿ ಯವರು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ. ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗಕ್ಕೆ ಸಲ್ಲಿಸಿದ "ಮುತ್ಸದ್ದಿ ಹಾಗೂ ಚಿಂತಕರಾಗಿ ಸತೀಶ್ ಜಾರಕಿಹೊಳಿಯರವರ ಕುರಿತು ಒಂದು ಅಧ್ಯಯನ". ಎಂಬ ಶೀರ್ಷಿಕೆಯ ಮಹಾ ಪ್ರಬಂಧಕ್ಕೆ ಡಾಕ್ಟರೇಟ್ ಪದವಿ ಪಡೆದುಕೊಂಡಿದ್ದಾರೆ. ರಾಜ್ಯದ ಪ್ರಭಾವಿ ನಾಯಕ ಮತ್ತು ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ರವರ ರಾಜಕೀಯ ಮತ್ತು ಸಾಮಾಜಿಕ ಕಾರ್ಯಗಳ ಕುರಿತು ಈ ಸಂಶೋಧನೆಯಲ್ಲಿ ಬೆಳಕು ಚೆಲ್ಲಿದ್ದಾರೆ.ಇವರಿಗೆ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊ.ವ್ಹಾಯ್.ಎಸ್. ಬಲವಂತಗೋಳ ಮಾರ್ಗದರ್ಶನ ನೀಡಿರುತ್ತಾರೆ. ಇವರ ಈ ಸಾಧನೆಗೆ ಕುಟುಂಬ ವರ್ಗದವರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.

# ನ. 27 ರಂದು ಬಿಜೆಪಿ ವಿಷೇಶ ಪ್ರಶಿಕ್ಷಣ ವರ್ಗದ ಪೂರ್ವಭಾವಿ ಸಭೆ: ಶಶಿಕಾಂತ

ಗೋಕಾಕ್: ಬೆಳಗಾವಿ ಗ್ರಾಮಾಂತರ ಜಿಲ್ಲಾ ಬಿಜೆಪಿ ಜನಪ್ರತಿನಿಧಿಗಳ ಒಂದು ದಿನದ ವಿಶೇಶ ಪ್ರಶಿಕ್ಷಣ ವರ್ಗ ನ. 27 ರಂದು ಗೋಕಾಕ ಸಪ್ಲಾಯರ್ ಸಭಾಭವನದಲ್ಲಿ ಜರುಗುಲಿದೆ ಎಂದು ವಿಭಾಗ ಪ್ರಶಿಕ್ಷಣ ಸಂಚಾಲಕ ಶಶಿಕಾಂತ ವಿಶ್ವಬ್ರಾಹ್ಮಣ ಹೇಳಿದರು

ಮಂಗಳವಾರದಂದು ಪಟ್ಟಣದ ಎನ್.ಎಸ್. ಎಫ್ ನಲ್ಲಿ ಜರುಗಿದ ಬೆಳಗಾವಿ ಗ್ರಾಮೀಣ ಚುನಾಯಿತ ಪ್ರತಿನಿಧಿಗಳ ಒಂದು ದಿನದ ಜಿಲ್ಲಾ ಪ್ರಶಿಕ್ಷಣ ವರ್ಗದ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿ, ಈ ಪ್ರಶಿಕ್ಷಣ ವರ್ಗಕ್ಕೆ ಗೊಕಾಕ, ಮೂಡಲಗಿ, ಬೈಲಹೊಂಗಲ, ರಾಮದುರ್ಗ, ಸವದತ್ತಿ, ಕಿತ್ತೂರು ಹಾಗೂ ಖಾನಾಪೂರ ತಾಲೂಕಿನ ಪುರಸಭೆ ಹಾಗೂ ಪಟ್ಟಣ ಪಂಚಾಯತಿಗೆ ಬಿಜೆಪಿಯಿಂದ ಚುನಾಯಿತರಾದ ಪ್ರತಿನಿಧಿಗಳಿಗಾಗಿ ಈ ಪ್ರಶಿಕ್ಷಣಾ ವರ್ಗ ಅತ್ಯಂತ ವಿಶಿಷ್ಟ ರೀತಿಯಲ್ಲಿ ಪ್ರವಾಸಿ ತಾಣ ಗೋಕಾಕ ಪಟ್ಟಣದಲ್ಲಿ ಆಯೋಜಿಸಲಾಗಿದೆ ಎಂದರು.



ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಭಾಷ ಪಾಟೀಲ ಮತ್ತು ಜಿಲ್ಲಾ ಮಾಧ್ಯಮ ಸಂಚಾಲಕ ಎಫ್.ಎಸ್.ಸಿದ್ದನಗೌಡರ ಮಾತನಾಡಿ, ಈ ವರ್ಗ ಚುನಾಯಿತ ಪ್ರತಿನಿಧಿಗಳಿಗೆ ಮಾತ್ರ ಮೀಸಲಾಗಿದ್ದು, ಈ ಕಾರ್ಯಕ್ರಮದ ತಯಾರಿ ಭರದಿಂದ ಸಾಗಿದೆ.

ಕಾರ್ಯಕ್ರಮದ ಕಾರ್ಯಾಲಯ, ಪ್ರಬಂಧಕರು, ಪ್ರಮುಖರು, ಅಪೇಕ್ಷಿತರ ಪಟ್ಟಿ ತಯಾರಿಕೆ, ನೋಂದಣಿ ಕಾರ್ಯ, ಸುಸಜ್ಜಿತ ವೇದಿಕೆ, ಪ್ರದರ್ಷಣೆ, ನಾಮ ಫಲಕ ಹಾಕುವುದು, ವಾಹನ ವ್ಯವಸ್ಥೆ, ಭೋಜನ ವ್ಯವಸ್ಥೆ ಆದಿಯಾಗಿ ಅನೇಕ ಜವಾಬ್ಧಾರಿಗಳನ್ನು ಅರಭಾಂವಿ ಮಂಡಲದ ಭಾಜಪ ಕಾರ್ಯಕರ್ತರು ನಿರ್ವಹಿಸಬೇಕು. ಈ ಕಾರ್ಯಕ್ರಮಕ್ಕೆ ಚುನಾಯಿತ ಬಿಜೆಪಿಯ ಜನಪ್ರತಿನಿಧಿಗಳು ಆಗಮಿಸುವದರಿಂದ ಅಚ್ಚುಕಟ್ಟಾಗಿ ನಡೆಯಬೇಕೆಂದರು.

# ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಿ: ವಿಜಯ ಅರಗಾಂವಿ

ಖಾನಾಪುರ:" ವ್ಯಸನ ಮುಕ್ತ ಜೀವನದಿಂದ ಮನುಷ್ಯನಿಗೆ ಸಮಾಜದಲ್ಲಿ ಹೆಚ್ಚಿನ ಗೌರವ ಸಿಗುತ್ತದೆ. ಮತ್ತು ಅವರು, ಮಾನಸಿಕ, ದೈಹಿಕ ಮತ್ತು ಆರ್ಥಿಕವಾಗಿ ಸುಧಾರಣೆಯಾಗಲು ಒಳ್ಳೆಯ ಅವಕಾಶ ಸಿಗುತ್ತದೆ" ಎಂದು ಎಸ್ ಆರ್ ಇ ಸಂಸ್ಥೆಯ ಕಾರ್ಯದರ್ಶಿಗಳಾದ ವಿಜಯ ಬಸಪಣ್ಣಾ ಅರಗಾ0ವಿ ಹೇಳಿದರು.

ತಾಲ್ಲೂಕಿನ ನಂದಗಡ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಖಾನಾಪುರ ಮತ್ತು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ 1760 ನೇ ಮದ್ಯವರ್ಜನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮದ್ಯ– ಮಾದಕಗಳಿಂದ ದೂರವಾದರೆ ಸಮಾಜದಲ್ಲಿ ಶಾಂತಿ ನೆಲೆಸಲಿದೆ. ನಿಮ್ಮೆಲ್ಲರ ಆರೋಗ್ಯದ ಹಿತದೃಷ್ಟಿಯಿಂದ ಮದ್ಯವರ್ಜನ ಶಿಬಿರ ಆಯೋಜಿಸಲಾಗಿದೆ. ಇದರ



ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ನಿರ್ದೇಶಕರು ಆದ ಸತೀಶ ನಾಯ್ಕ್ ಅವರು ಮಾತನಾಡಿ, "ದೇಶದ ಆರ್ಥಿಕ ಪ್ರಗತಿಗೆ ವ್ಯಸನ ಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ ವಾಗಬೇಕಿದೆ.

ಆ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿರುವ ವಿವಿಧ ಯೋಜನಾ ಕಾರ್ಯಗಳು ನಿಜಕ್ಕೂ ಶ್ಲಾಘನೀಯ," ಎಂದು ಹೇಳಿದರು.

ಶಿಬಿರದ ಯೋಜನಾಧಿಕಾರಿ ಭಾಸ್ಕರ, ಖಾನಾಪುರ ತಾಲ್ಲೂಕಿನ ಯೋಜನಾಧಿಕಾರಿಗಳು ಆದ ಸತೀಶ ನಾಯ್ಕ್, ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಸದಸ್ಯರಾದ ಶಂಕರ ಸೋನೋಲಿ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿಕೊಂಡರು.

ಈ ವೇಳೆ ಯಲ್ಲಪ್ಪ ಗುರವ, ಸದಾನಂದ ಪಾಟೀಲ, ಯಲ್ಲಪ್ಪ ಸಾಗರ, ಲಕ್ಷ್ಮಣ ಬೋಟೆಕರ, ಅಪ್ಪಾಜಿ ಪಾಟೀಲ, ಸಂಗೀತಾ ತಹಸೀಲ್ದಾರ, ಅಶ್ವಿನಿ ಹೊಸೂರಿ, ಮಹಾದೇವ ದಳವಿ, ಗ್ರಾಪಂ ಸದಸ್ಯರು, ಸ್ವ ಸಹಾಯ ಸಂಘದ ಎಲ್ಲಾ ಸದಸ್ಯರು, ತೃಪ್ತಿ ಜ್ಞಾನ ವಿಕಾಸ ಕೇಂದ್ರದ ಸದಸ್ಯರು, ಪ್ರಾಥಮಿಕ ಆರೋಗ್ಯ ಸಹಾಯಕರು, ಸಿಬಿರಾಧಿಕಾರಿಗಳು ದಿನೇಶ ಮರಾಠಿ, ಸೌಮ್ಯ, ಎಲ್ಲಾ ವಲಯದ ಮೇಲ್ವಿಚಾರಕರು, ಸೇವಾ ಪ್ರತಿನಿದಿಗಳು, ಸಿ ಎಸ್ ಸಿ ಸೇವಾದಾರರು, ಲೆಕ್ಕ ಭುಜಂಗ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಸುರೇಖಾ ಕೋಳಿ ಸೇರಿದಂತೆ ಇತರರು ಇದ್ದರು. ತಾಲ್ಲೂಕಿನ ಯೋಜನಾಧಿಕಾರಿ ಗಣಪತಿ ನಾಯ್ಕ್ ಸ್ವಾಗತಿಸಿದರು. ಅರುಣ್ ನಿರೂಪಿಸಿದರು. ಮಹಾಂತೇಶ ದುಳಿಕೊಪ್ಪ ವಂದಿಸಿದರು.

# ಅತ್ತೆ ಮನೆಗೇ ಕನ್ನ ಹಾಕಿದ್ದ ಅಳಿಯ ಅರೆಸ್ಟ್

ಬೆಂಗಳೂರು: ಮಗಳನ್ನು ಪ್ರೀತಿಸಿ ಆಕೆಯೊಂದಿಗೆ ಓಡಿ ಹೋಗಿದ್ದ ಅಳಿಯನೇ ಅತ್ತೆ ಮನೆಗೆ ಕನ್ನ ಹಾಕಿ 2.35 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳ್ಳತನ ಮಾಡಿರುವುದು ಬೆಳಕಿಗೆ ಬಂದಿದೆ. ಹಲಸೂರಿನ ಎಂವಿ ಗಾರ್ಡನ್ ನಿವಾಸಿ ಪ್ರದೀಪ್ ಕುಮಾರ್(23) ಬಂಧಿತ ಅಳಿಯ. ಈತ ಅತ್ತೆ ಮನೆಗೆ ಕನ್ನ ಹಾಕಿದ್ದ ದೃಶ್ಯ ನೆರೆಮನೆಯ ಮೊಬೈಲ್ನಲ್ಲಿ ಸೆರೆಯಾಗಿದೆ. ಹಲಸೂರು ಪೊಲೀಸ್ ಠಾಣಾ ವ್ಯಾಪ್ತಿಯ ನಿವಾಸಿ ರೆಜಿನಾ ಎಂಬುವರ ಚಿಕ್ಕ ಮಗಳನ್ನು ಒಂದೂವರೆ ವರ್ಷದ ಹಿಂದೆ ಪ್ರೀತಿಸಿ ಇಬ್ಬರೂ ಮನೆ ಬಿಟ್ಟು ಹೋಗಿದ್ದರು. ಈ ನಡುವೆ ರೆಜಿನಾ ಅವರು ಕನ್ಯಾಕುಮಾರಿಗೆ ಹೋಗಿದ್ದಾಗ ಅಳಿಯ ಪ್ರದೀಪ್ ಕುಮಾರ್ ಇವರ ಮನೆ ಬಳಿ ಬಂದು ಬಾಗಿಲು ಒಡೆದು ಒಳನುಗ್ಗಿ ಚಿನ್ನಾಭರಣವನ್ನು ಕಳ್ಳತನ ಮಾಡಿಕೊಂಡು ಹೋಗುತ್ತಿದ್ದಾಗ ನೆರೆಮನೆ ನಿವಾಸಿಗಳು ಗಮನಿಸಿ ಆತನನ್ನು ಪ್ರಶ್ನಿಸಿದಾಗ ನಾನು ಅವರ ಸಂಬಂಧಿಕ ಎಂದು ಹೇಳಿದ್ದಾನೆ. ಅನುಮಾನಗೊಂಡ ನೆರೆಮನೆ ನಿವಾಸಿಯೊಬ್ಬರು ಆತನ ಫೋಟೋ ವನ್ನು ಮೊಬೈಲ್ನಲ್ಲಿ ಸೆರೆ ಹಿಡಿದಿದ್ದರು. ನಂತರ ರೆಜಿನಾ ಅವರ ಮೊಬೈಲ್ಗೆ ಕರೆ ಮಾಡಿ ವಿಷಯ ತಿಳಿಸಲು ಯತ್ನಿಸಿದರಾದರೂ ಅವರ ಮೊಬೈಲ್ ನಾಟ್ರೀಚಬಲ್ ಆದ ಹಿನ್ನೆಲೆಯಲ್ಲಿ ಸಂಪರ್ಕ ಸಾಧ್ಯವಾಗಿರಲಿಲ್ಲ. ರೆಜಿನಾ ಅವರು ಕನ್ಯಾಕುಮಾರಿಯಿಂದ ಮನೆಗೆ ವಾಪಸ್ ಆದಾಗ ಬಾಗಿಲು ಒಡೆದಿರುವುದು ಗಮನಿಸಿ ಒಳಗೆ ಹೋಗಿ ನೋಡಿದಾಗ ಆಭರಣ ಕಳ್ಳತನವಾಗಿರುವುದು ಕಂಡು ಬಂದಿದೆ. ಈ ಬಗ್ಗೆ ನೆರೆಹೊರೆಯವರನ್ನು ವಿಚಾರಿಸಿದಾಗ ಮೊಬೈಲ್ನಲ್ಲಿ ಸೆರೆಹಿಡಿದಿದ್ದ ಫೋಟೋ ತೋರಿಸಿದಾಗ ಆ ವ್ಯಕ್ತಿ ತಮ್ಮ ಅಳಿಯ ಎಂಬುವುದು ಗೊತ್ತಾಗಿದೆ. ಈ ಬಗ್ಗೆ ಹಲಸೂರು ಪೊಲೀಸ್ ಠಾಣೆಗೆ ರೆಜಿನಾ ಅವರು ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿ ಪ್ರದೀಪ್ ಕುಮಾರನನ್ನು ಬಂಧಿಸಿ 47 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಈತನ ಬಂಧನದಿಂದ ಹಲಸೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಒಂದು ಹಗಲು ಕನ್ನಕಳವು ಪ್ರಕರಣ ಪತ್ತೆಯಾಗಿರುತ್ತದೆ. ಇನ್ಸ್ಪೆಕ್ಟರ್ ಶಿವರಾಜ್ ಗಸಂಗಿ ಹಾಗೂ ಸಿಬ್ಬಂದಿ ಈ ಕಾರ್ಯಾಚರಣೆ ಕೈಗೊಂಡಿದ್ದರು.

# ಅಧಿವೇಶನ ವೇಳೆ ಹುಕ್ಕೇರಿಯ ಅಂಬೇಡ್ಕರ ಪ್ರತಿಮೆ ಅನಾವರಣ

ಹುಕ್ಕೇರಿ : ಪಟ್ಟಣದ ಕೋರ್ಟ್ ಸರ್ಕಲ್ ಬಳಿಯ ಹಳೇ ತಹಸೀಲದಾರ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಕಂಚಿನ ಪ್ರತಿಮೆ ಅನಾವರಣ ಹಾಗೂ ನೂತನ ಉದ್ಯಾನವನದ ಉದ್ಘಾಟನೆಯನ್ನು ಬರುವ ಡಿಸೆಂಬರ್ ತಿಂಗಳಲ್ಲಿ ಅತ್ಯಂತ ಅದ್ದೂರಿ ಮತ್ತು ಐತಿಹಾಸಿಕವಾಗಿ ಆಯೋಜಿಸಲು ನಿರ್ಧರಿಸಲಾಯಿತು.

ತಾಲೂಕಿನ ಬೆಲ್ಲದ ಬಾಗೇವಾಡಿಯಲ್ಲಿ ಮಂಗಳವಾರ ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಭಾವೈಕ್ಯತೆಗೆ ಹೆಸರುವಾಸಿಯಾದ ಹುಕ್ಕೇರಿಯಲ್ಲಿ ಪ್ರತಿಷ್ಠಾಪಿಸಿರುವ ಅಂಬೇಡ್ಕರ ಪ್ರತಿಮೆ ಅನಾವರಣ ಕಾರ್ಯಕ್ರಮದ ರೂಪರೇಷೆಗಳ ಕುರಿತು ಏರ್ಪಡಿಸಿದ ಪೂರ್ವಭಾವಿ ಸಭೆಯಲ್ಲಿ ಚರ್ಚಿಸಿ ಅಂತಿಮ ನಿರ್ಣಯ ಕೈಗೊಳ್ಳಲಾಯಿತು.

ಪಟ್ಟಣ ಸೇರಿದಂತೆ ತಾಲೂಕಿನ ಜನರ ಬಹುದಿನಗಳ ಬೇಡಿಕೆಯಂತೆ ಅಂಬೇಡ್ಕರ ಪ್ರತಿಮೆ, ಉದ್ಯಾನವನ ಸ್ಥಾಪಿಸಲಾಗಿದೆ. ಇದಕ್ಕಾಗಿ ರಾಜೇಶ್ವರಿ ವಿಶ್ವನಾಥ ಕತ್ತಿ ಧರ್ಮಾರ್ಥ ಸ್ಮಾರಕ ಟ್ರಸ್ಟ್, ಸಮಾಜದ ಮುಖಂಡರು ಹಾಗೂ ಸರ್ಕಾರ ಆರ್ಥಿಕ ನೆರವು ಕಲ್ಪಿಸಿವೆ. ಹಾಗಾಗಿ ಅನಾವರಣ ಕಾರ್ಯಕ್ರಮವನ್ನು ಸ್ಮರಣೀಯ, ವಿಶಿಷ್ಟ ಹಾಗೂ ವಿಶೇಷವಾಗಿ ಏರ್ಪಡಿಸಲು ತೀರ್ಮಾನಿಸಲಾಯಿತು.

ಬರುವ ಡಿಸೆಂಬರ್ ತಿಂಗಳು ಬೆಳಗಾವಿಯಲ್ಲಿ ನಡೆಯಲಿರುವ ಉಭಯ ವಿಧಾನ ಮಂಡಳದ ಚಳಿಗಾಲದ ಅಧಿವೇಶನದಲ್ಲಿ ಈ ಕಾರ್ಯಕ್ರಮ ಏರ್ಪಡಿಸಲು ಎಲ್ಲ ಅಗತ್ಯ ಸಿದ್ಧತೆಗಳನ್ನು



ಮಾಡಿಕೊಳ್ಳಬೇಕು. ಸಹಸ್ರಾರು ಜನರು ಭಾಗಿಯಾಗುವಂತೆ ವ್ಯವಸ್ಥೆ ಕಲ್ಪಿಸಬೇಕು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಿವಿಧ ರೂಪಕಗಳು ಮತ್ತು ಕಲಾ ತಂಡಗಳ ಭವ್ಯ ಮೆರವಣಿಗೆ, ಪ್ರಮುಖ ವೃತ್ತ, ಆಯಕಟ್ಟಿನ ಸ್ಥಳಗಳನ್ನು ವಿದ್ಯುತ್ ದೀಪಾಲಂಕಾರದಿಂದ ಶೃಂಗಾರ, ಕಟೌಟ್–ಬ್ಯಾನರ್‌ಗಳ ಅಳವಡಿಸಿ ಇಡೀ ಹುಕ್ಕೇರಿಯನ್ನು ನೀಲಿಮಯಗೊಳಿಸುವ ಕುರಿತು ಚರ್ಚಿಸಲಾಯಿತು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಉದ್ಘಾಟಿಸಲಿದ್ದು ಶಾಸಕ ನಿಖಿಲ್ ಕತ್ತಿ ಅಧ್ಯಕ್ಷತೆ ವಹಿಸುವರು. ಗೃಹ ಸಚಿವ ಡಾ.ಜಿ.ಪರಮೇಶ್ವರ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ, ಶಾಸಕರಾದ ಪ್ರಸಾದ ಅಬ್ಬಯ್ಯ, ದುರ್ಯೋದನ ಐಹೊಳೆ, ಮಹೇಂದ್ರ ತಮ್ಮಣ್ಣವರ, ಆಹ್ವಾನಿಸುವ ಕುರಿತು ತೀರ್ಮಾನಿಸಲಾಯಿತು.

ಈ ವೇಳೆ ರಮೇಶ ಕತ್ತಿ ಮಾತನಾಡಿ, ಮಹಾನ್ ಪುರುಷರ ಪ್ರತಿಮೆಗಳ ಸ್ಥಾಪಿಸುವ ಮೂಲಕ ಯುವ ಪೀಳಿಗೆಗೆ ಇತಿಹಾಸ, ಜೀವನಾದರ್ಶ, ಚರಿತ್ರೆ, ಪರಂಪರೆ ಪರಿಚಯಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಜಿಲ್ಲಾ ಸಮಿತಿ ಮಾಜಿ ಸದಸ್ಯ ಸುರೇಶ ತಳವಾರ ಮಾತನಾಡಿ, ನೂತನವಾಗಿ ಪ್ರತಿಷ್ಠಾಪಿಸಿರುವ ಅಂಬೇಡ್ಕರ ಪ್ರತಿಮೆ, ಉದ್ಯಾನವನದ ಮತ್ತಷ್ಟು ಅಭಿವೃದ್ಧಿಗೆ ಅನುದಾನ ಒದಗಿಸುವಂತೆ ಮನವಿ ಮಾಡಿದರು.

ಮುಖಂಡರಾದ ಸುರೇಶ ತಳವಾರ, ಬಿ.ಕೆ.ಸದಾಶಿವ, ಶ್ರೀಕಾಂತ ತಳವಾರ, ರಮೇಶ ಹುಂಜಿ, ದೀಪಕ ವೀರಮುಖ, ಮಾರುತಿ ತಳವಾರ, ಅಪ್ಪಣ್ಣಾ ಖಾತೇದಾರ, ಅಕ್ಷಯ ವೀರಮುಖ, ಶಂಕರ ತಿಪ್ಪನಾಯಿಕ, ಮುತ್ತು ಕಾಂಬಳೆ, ಸಂತೋಷ ಗಸ್ತಿ, ಕುಮಾರ ತಳವಾರ, ಕಾಶಪ್ಪಾ ಹರಿಜನ, ರಾಜೇಂದ್ರ ಮೋಶಿ, ಶಿವಾನಂದ ಮರಿನಾಯಿಕ, ನಾಗೇಶ ಸಣ್ಣಕ್ಕಿ, ರೋಹಿತ ತಳವಾರ, ವಿನೋದ ಮಾಳಗೆ, ಉಮೇಶ ಮಾಳಗೆ ಮತ್ತಿತರರು ಉಪಸ್ಥಿತರಿದ್ದರು.

# ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ವಾರ್ಷಿಕ ಸರ್ವಸಾಧರಣ ಸಭೆ

ಬೆಳಗಾವಿ: ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ವಾರ್ಷಿಕ ಸರ್ವಸಾಧರಣ ಸಭೆಯನ್ನು ಹುಬ್ಬಳ್ಳಿಯ ಬಂಡಿವಾಡದ ಹವೀಕ ಭವನದಲ್ಲಿ ಕರೆಯಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸಂಘಟನೆಯ ಅಧ್ಯಕ್ಷರಾದ ಅಶೋಕ ಹಾರನಹಳ್ಳಿಯವರು ವಹಿಸಿದ್ದರು. ಸಂಘಟನಾ ಕಾರ್ಯದರ್ಶಿಗಳಾದ ವಿಜಯ ನಾಡಜಿಶಿ, ಮಾಜಿ ಮೇಯರ್ ಹನುಮಂತ ಡಂಬಳ ಗಣ್ಯರು ಈ ಸಭೆಯಲ್ಲಿ ಉಪಸ್ಥಿತರಿದ್ದರು.

ಬೆಂಗಳೂರು, ಹಾವೇರಿ, ಬೆಳಗಾವಿ, ಹಾನಗಲ್ಲ, ವಿಜಯಪುರ, ಬಾಗಲಕೋಟ, ಧಾರವಾಡ, ಗದಗ, ಕೊಪ್ಪಳ, ಮಂಡ್ಯ ಹೀಗೆ ಬೇರೆ ಬೇರೆ ಜಿಲ್ಲೆಗಳಿಂದ ವಿಪ್ರ ಮಹಿಳಾ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಇವರೊಂದಿಗೆ ಅಧ್ಯಕ್ಷರಾದ ಅಶೋಕ ಹಾರನಹಳ್ಳಿಯವರು ಸಂವಾದ ನಡೆಸಿ




ಹಲವಾರ ಸಲಹೆ ಸೂಚನೆಗಳನ್ನು ನೀಡಿದರು.

ಸದಸ್ಯೆಯರಾದ ಅನುಶ್ರೀ, ಜಯಶ್ರೀ, ಲಕ್ಷ್ಮೀ, ಮುಕ್ತಾ ಮತ್ತು ವೇರ್ಣಾ ಹೀಗೆ ಹಲವಾರು ಮಹಿಳೆಯರು ಜ. 6 ಮತ್ತು 7 ರಂದು ಬೆಂಗಳೂರಿನ ಶಂಕರಮಠದಲ್ಲಿ ನಡೆಯಲಿರುವ ವಿಪ್ರ ಮಹಾವೇಶದಲ್ಲಿ ಸ್ವಇಚ್ಛೆಯಿಂದ ಮುಂದಾಗಿ ಬಂದರು.

ಈ ಕುರಿತಂತೆ ಅವರೊಂದಿಗೆ ಮಾತನಾಡಿದ ಬೆಳಗಾವಿ ಜಿಲ್ಲಾ ಎ.ಕೆ.ಬಿ.ಎಂ.ಎಸ್. ಸಂಘಟನಾ ಕಾರ್ಯದರ್ಶಿ ಶ್ರೀಮತಿ ಪ್ರಿಯಾ ಪುರಾಣಿಕ ಮತ್ತು ಉಪಾಧ್ಯಕ್ಷೆ ರೂಪಾ ಶಾಸ್ತ್ರಿ ಎಲ್ಲರನ್ನೂ ಅಭಿನಂದಿಸಿ, ಕಾರ್ಯವೈಖರಿಯನ್ನು ತಿಳಿಸಿಕೊಟ್ಟು ಎಲ್ಲರೂ ಸೇರಿ ಸಮ್ಮೇಳನ ಯಶಸ್ವಿಗೊಳಿಸೋಣ ಎಂದು ಹೇಳಿದರು.

# ನ.24ರಂದು ಬ್ಯಾಡ್‌ಮ್ಯಾನರ್ಸ್ ತೆರೆಗೆ



ಬೆಳಗಾವಿ: "'ಬ್ಯಾಡ್‌ಮ್ಯಾನರ್ಸ್' ಚಲನಚಿತ್ರ ನ.24ರಂದು ರಾಜ್ಯದಾದ್ಯಂತ 300 ಚಿತ್ರ ಮಂದಿರಗಳಲ್ಲಿ ಏಕಕಾಲಕ್ಕೆ ತೆರೆಕಾಣಲಿದೆ" ಎಂದು ನಟ ಅಭಿಷೇಕ್ ಅಂಬರೀಷ್ ಹೇಳಿದರು.

ಇಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ದುನಿಯಾ ಸೂರಿ ನಿರ್ದೇಶನದಲ್ಲಿ ಮೂಡಿಬಂದಿರುವ ಈ ಸಿನಿಮಾ ಆಯಕ್ಷನ್ ಆಧಾರಿತವಾಗಿದ್ದು, ಬೆಂಗಳೂರು, ಮೈಸೂರು ಮತ್ತಿತರ ಕಡೆ ಚಿತ್ರೀಕರಣಗೊಂಡಿದೆ.

ಈ ಚಿತ್ರದ ಪ್ರಚಾರಕ್ಕಾಗಿ ಬೆಳಗಾವಿಗೆ ಬಂದಿದ್ದೇನೆ' ಎಂದು ತಿಳಿಸಿದರು. ಸಣ್ಣ ಬಜೆಟ್‌ನ ಹಲವು ಚಿತ್ರಗಳೂ ಪ್ರೇಕ್ಷಕರ ಮನಗೆದ್ದಿವೆ. ಈ ಚಿತ್ರಕ್ಕೂ ಉತ್ತಮ ಸ್ಪಂದನೆ ಸಿಗುತ್ತದೆ ಎನ್ನುವ ಸಂಪೂರ್ಣ ವಿಶ್ವಾಸವಿದೆ. ಈ ಭಾಗದ ಜನರೂ ಸಿನಿಮಾ ವೀಕ್ಷಿಸಿ ಪ್ರೋತ್ಸಾಹಿಸಬೇಕು' ಎಂದು ಕೋರಿದರು. ರಾಜವೀರ ಹಿರೇಮಠ, ವಿಜಯಕುಮಾರ ಇತರರಿದ್ದರು.

# ಗಿಗ್ ಕಾರ್ಮಿಕರಿಗೆ ಯುನಿವರ್ಸಲ್ ಐಡಿ ಕಾರ್ಡ್ ನೀಡುವ ಕುರಿತು ಚಿಂತನೆ: ಸಚಿವ ಸಂತೋಷ್ ಲಾಡ್



ಉಡುಪಿ: ಆಹಾರ ವಿತರಣಾ ಆ್ಯಪ್‌ಗಳು ಮತ್ತು ಇ-ಕಾಮರ್ಸ್ ಕಂಪನಿಗಳೊಂದಿಗೆ ಕೆಲಸ ಮಾಡುವ ಗಿಗ್ ಯುನಿವರ್ಸಲ್ ಐಡಿ ಕಾರ್ಡ್ ನೀಡುವ ಕುರಿತು ಚಿಂತನೆ ನಡೆಸಲಾಗುತ್ತಿದ್ದು, ಇದರಿಂದ ಅವರು ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ ಪ್ರಯೋಜನಗಳನ್ನು ಪಡೆಯಬಹುದು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಸೋಮವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಗಿಗ್ ಕಾರ್ಯಕರ್ತರ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ 10 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ್ದಾರೆ. ಈ ನಿಟ್ಟಿನಲ್ಲಿ ನಿಯಮಾವಳಿಗಳನ್ನು ರೂಪಿಸಲಾಗುತ್ತಿದ್ದು, ಇದನ್ನು ಕಾನೂನಿನ ಅಡಿಯಲ್ಲಿ ತರಲಾಗುವುದು ಎಂದು ಹೇಳಿದರು.

ಗಿಗ್ ಕಾರ್ಮಿಕರ ಕುರಿತ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಎಲ್ಲಾ ಗಿಗ್ ಗಿಗ್ ಕಾರ್ಮಿಕರಿಗೆ ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಲು ಅವರಿಗೆ ಅವಕಾಶ ನೀಡಲಾಗುತ್ತದೆ. ಈ ಸೌಲಭ್ಯವು ರಾಜ್ಯದ ಸುಮಾರು 4–5 ಲಕ್ಷ ಜನರಿಗೆ ಸಹಾಯ ಮಾಡುತ್ತದೆ. ಅಸಂಘಟಿತ ವಲಯದ ವ್ಯಾಪಾರಿಗಳು, ಬೀದಿಬದಿ ವ್ಯಾಪಾರಿಗಳು, ಹೋಟೆಲ್ ನೌಕರರು, ಟೈಲರ್‌ಗಳು ಮತ್ತು ಇತರ ಎಲ್ಲ ಕಾರ್ಮಿಕರಿಗೆ ಸಹಾಯ ಮಾಡಲು ಸಾರ್ವತ್ರಿಕ ಸಾಮಾಜಿಕ ಭದ್ರತಾ ಮಸೂದೆಯನ್ನು ಪರಿಚಯಿಸಲು ಸರ್ಕಾರ ಯೋಜಿಸಿದೆ. ಸರ್ಕಾರದ ಮುಂದೆ ರಾಜಸ್ಥಾನ ಮಾದರಿ ಮಸೂದೆ ಇದ್ದು, ಅದರ ಕುರಿತು ಚಿಂತನೆ ನಡೆಸಲಾಗುತ್ತಿದೆ. ಈ ಕುರಿತ ಮಸೂದೆಯು ಮುಂಬರುವ ಚಳಿಗಾಲ ಅಧಿವೇಶನದಲ್ಲಿ ಮಂಡಿಸುವ ಸಾಧ್ಯತೆಗಳಿವೆ ಎಂದು ತಿಳಿಸಿದರು.

ಕೂಲಿಕಾರರ ಮಕ್ಕಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನದಲ್ಲಿ ಕಡಿತ ಮಾಡಿರುವ ಕುರಿತ ಪ್ರಶ್ನೆಗೆ ಉತ್ತರಿಸಿ, ವಿದ್ಯಾರ್ಥಿ ವೇತನ ನಾವು ಕಡಿತ ಮಾಡಿಲ್ಲ. 2021 ರಲ್ಲಿ 2,000 ಇದ್ದ ವಿದ್ಯಾರ್ಥಿ ವೇತನ ಎಂಟು ಸಾವಿರಕ್ಕೆ ಏರಿಸಿದರು. 10,000 ನೀಡುವವರಿಗೆ 30,000 ಕೊಟ್ಟರು. ಮೂವತ್ತು ಸಾವಿರ ಕೊಡುವವರಿಗೆ ಒಂದು ಲಕ್ಷ ರೂ. ಕೊಟ್ಟರು. ಇದು ಅವೈಜ್ಞಾನಿಕ ಕ್ರಮವಾಗಿತ್ತು. ಕಳೆದ ಮೂರು ವರ್ಷಗಳಲ್ಲಿ ಏಕಾಏಕಿ 39 ಲಕ್ಷ ಕಾರ್ಡ್ ಬೇಡಿಕೆ ಬಂತು. ಹಾವೇರಿ ಜಿಲ್ಲೆಯಲ್ಲಿ ಮೂರು ಲಕ್ಷ ಕಾರ್ಡುಗಳಿವೆ. ಇದರಲ್ಲಿ ಅನೇಕ ನಕಲಿ ಕಾರ್ಡುಗಳಿವೆ. ಈ ಬಾರಿ 13 ಲಕ್ಷ ಅರ್ಜಿಗಳು ಬಂದಿವೆ. ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ 9 ಲಕ್ಷ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಿದ್ದೇವೆ, ವೈಜ್ಞಾನಿಕ ರೀತಿಯಲ್ಲಿ ಈ ಸಮಸ್ಯೆ ನಿರ್ವಹಿಸುತ್ತೇವೆ. ನಿಜವಾದ ಕಾರ್ಮಿಕರ ಮಕ್ಕಳಿಗೆ ಸರ್ಕಾರದಿಂದ ಸಹಾಯ ಸಿಗಬೇಕು. ಈ ಹಿನ್ನೆಲೆಯಲ್ಲಿ ನಕಲಿ ಕಾರ್ಡ್ ಗಳು ಯಾವುದು ಎಂಬುದನ್ನು ಪತ್ತೆ ಹಚ್ಚುತ್ತೇವೆ. ಅಧಿಕಾರಿಗಳು ಈ ಕೆಲಸ ಮಾಡುತ್ತಿದ್ದಾರೆ ಎಂದರು.

# ಬೆಳ್ಳಂಬೆಳಗ್ಗೆ ಉದ್ಯಮಿಗಳಿಗೆ ಐಟಿ ಅಧಿಕಾರಿಗಳು ಶಾಕ್

ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ಬೆಳ್ಳಂಬೆಳಗ್ಗೆ ಉದ್ಯಮಿಗಳಿಗೆ ಐಟಿ ಅಧಿಕಾರಿಗಳು ಶಾಕ್ ನೀಡಿದ್ದಾರೆ. ಮಾಗಡಿ ರಸ್ತೆ, ಆಡುಗೋಡಿ ಸೇರಿದಂತೆ ವಿವಿಧ ಕಡೆಗಳಲ್ಲಿ ಐಟಿ ದಾಳಿ ನಡೆಸಲಾಗಿದೆ.

ತೆರಿಗೆ ವಂಚನೆ ಆರೋಪದ ಮೇಲೆ ಉದ್ಯಮಿಗಳ ಮನೆ ಹಾಗೂ ಕಚೇರಿಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಮಾಗಡಿ ರಸ್ತೆ ಬಳಿ ಇರುವ ಇಟಿಎ ಗಾರ್ಡನ್ ಅಪಾರ್ಟ್ಮೆಂಟ್‌ನಲ್ಲಿ ಇರುವ ಪುನೀತ್ ಬೋರಾ ಮನೆ ಮೇಲೆ ದಾಳಿ ನಡೆಸಿದ್ದಾರೆ. 2 ಕಾರುಗಳಲ್ಲಿ ಬಂದಿರುವ ಅಧಿಕಾರಿಗಳು ತೀವ್ರ ಶೋಧ ನಡೆಸುತ್ತಿದ್ದಾರೆ. ಆಡುಗೋಡಿ ಬಳಿಯ ಆಕ್ರೋಪೊಲಿಸ್ ಅಪಾರ್ಟ್ಮೆಂಟ್ ನಲ್ಲಿಯೂ ಸಹ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ರಿಕ್ಕಿ ಘೋಷ್ ಎಂಬವರ ಮನೆಯಲ್ಲಿ ಪರಿಶೀಲನೆ ನಡೆಸಲಾಗುತ್ತಿದೆ. ಉದ್ಯಮಿಯಾಗಿರುವ ರಿಕ್ಕಿ ಘೋಷ್ ನೆಲೆಸಿರುವ ಅಪಾರ್ಟ್ಮೆಂಟ್‌ನಲ್ಲಿ ಹುಡುಕಾಟ ನಡೆಯುತ್ತಿದೆ. ಇನೋವಾ ಕಾರ್‌ನಲ್ಲಿ ಐಟಿ ಅಧಿಕಾರಿಗಳು ಆಗಮಿಸಿದ್ದಾರೆ.

# ಲೈಂಗಿಕ ಕಿರುಕುಳ ಪ್ರಕರಣ: ಆರೋಪಿ ಮುರುಘಾ ಶ್ರೀಗೆ ಬಿಗ್ ರಿಲೀಫ್

ಬೆಂಗಳೂರು: ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗ ಮುರುಘಾ ಶ್ರೀಗಳು ಜೈಲಿನಿಂದ ಬಿಡುಗಡೆಯಾಗಿದ್ದು, ಇದರ ಬೆನ್ನಲ್ಲೇ ಇದೀಗ ಮುರುಘಾ ಶ್ರೀ ಪ್ರಕರಣಗಳ ವಿಚಾರಣೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಚಿತ್ರದುರ್ಗ 2ನೇ ಜಿಲ್ಲಾ ನ್ಯಾಯಾಧೀಶರ ಮುಂದಿರುವ ಕೇಸ್‌ಗಳಿಗೆ ತಡೆ ನೀಡಿ ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಆದೇಶ ಹೊರಡಿಸಿದೆ. ಇದರೊಂದಿಗೆ ಮುರುಘಾ ಶರಣರಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.


ಮುರುಘಾಶ್ರೀ ಪರ ಹಿರಿಯ ವಕೀಲ ಸಿ.ವಿ.ನಾಗೇಶ್ ಅವರು ವಾದ ಮಂಡಿಸಿ, 2ನೇ ಅಪರ ಜಿಲ್ಲಾ ನ್ಯಾಯಾಧೀಶರಿಂದ ಪೂರ್ವಾಗ್ರಹಪೀಡಿತ ಕ್ರಮ ಆರೋಪ ಹಿನ್ನೆಲೆಯಲ್ಲಿ ಸಾಕ್ಷ್ಯ ವಿಚಾರಣೆ ಬೇರೆ ಕೋರ್ಟ್ಗೆ ವರ್ಗಾಯಿಸುವಂತೆ ಮನವಿ ಮಾಡಿದರು.

ಮುರುಘಾ ಶ್ರೀಗಳಿಗೆ ಜಾಮೀನು ನೀಡಿದಾಗಲೂ ತಕ್ಷಣ ಬಿಡುಗಡೆಗೆ ಆದೇಶಿಸಲಿಲ್ಲ.

ಬಿಡುಗಡೆ ಆದೇಶ ಹೊರಡಿಸಲು ತಡ ಮಾಡಿದ್ದಾರೆ. ಇದರಿಂದಾಗಿ ಮೂರು ದಿನ ಮುರುಘಾಶ್ರೀ ಜೈಲಿನಲ್ಲಿರಬೇಕಾಯ್ತು.

ವಿಚಾರಣೆ ಮುಂದೂಡುವಂತೆ ಆದೇಶಿಸಿದ್ದರೂ ವಿಚಾರಣೆ ನಡೆಸಲಾಗಿದೆ. ಚಿತ್ರದುರ್ಗಕ್ಕೆ ಬರದಂತೆ ಹೈಕೋರ್ಟ್ ನಿರ್ಬಂಧಿಸಿದ್ದರೂ ವಾರಂಟ್ ಜಾರಿ ಮಾಡಿದೆ.

ಚಿತ್ರದುರ್ಗ ಜಿಲ್ಲೆಗೆ ಕರೆತರುವಂತೆ 2ನೇ ಅಪರ ಜಿಲ್ಲಾ ನ್ಯಾಯಾಧೀಶರು ಆದೇಶಿಸಿದ್ದಾರೆ. ಪಾಸ್ ಪೋರ್ಟ್ ವಶಕ್ಕೆ



ನೀಡಿದಾಗಲೂ ಅದರ ಪರಿಶೀಲನೆಗೆ ಕಳುಹಿಸಿದರು.

ಹೈಕೋರ್ಟ್ ಆದೇಶ ವಿಫಲಗೊಳಿಸಲು ಬಂಧನಕ್ಕೆ ಆದೇಶಿಸಿದ್ದಾರೆ ಎಂದು ವಾದ ಮಂಡಿಸಿದರು.

ಈ ವಾದವನ್ನು ಆಲಿಸಿದ ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ, ಚಿತ್ರದುರ್ಗ 2ನೇ ಜಿಲ್ಲಾ ನ್ಯಾಯಾಧೀಶರ ಮುಂದಿರುವ ಮುರುಘಾಶ್ರೀಗಳ ಪ್ರಕರಣ ವಿಚಾರಣೆಗೆ ತಡೆ ನೀಡಿ ಆದೇಶ ಹೊರಡಿಸಿದ್ದಾರೆ.

ಇದರೊಂದಿಗೆ ಮುರುಘಾ ಶ್ರೀಗಳು ಮೇಲಿಂದ ಮೇಲೆ ರಿಲೀಫ್ ಸಿಕ್ಕಂತಾಗಿದೆ.

ಈಗಾಗಲೇ ಮುರುಘಾ ಶರಣರು ಮೊದಲ ಪೋಕ್ಸೋ ಪ್ರಕರಣದಲ್ಲಿ ಜಾಮೀನು ಪಡೆದುಕೊಂಡು ಒಂದು ವರ್ಷದ ನಂತರ ಜೈಲಿನಿಂದ ಬಿಡುಗಡೆಗೊಂಡಿದ್ದರು. ಆದರೆ, 2ನೇ ಪೋಕ್ಸೋ ಪ್ರಕರಣದಲ್ಲಿ ನಿನ್ನೆ (ನವೆಂಬರ್ 21) ಚಿತ್ರದುರ್ಗ ನ್ಯಾಯಾಲಯ ಮುರುಘಾ ಶ್ರೀ ವಿರುದ್ಧ ಅರೆಸ್ಟ್ ವಾರೆಂಟ್ ಜಾರಿ ಮಾಡಿತ್ತು. ಅದರಂತೆ ಚಿತ್ರದುರ್ಗ ಗ್ರಾಮಾಂತರ ಠಾಣೆ ಪೊಲೀರು ಶ್ರೀಗಳು ಬಂಧಿಸಿದ್ದರು. ಆದರೆ, ಇತ್ತ ಹೈಕೋರ್ಟ್ ತಡೆ ನೀಡಿತ್ತು. ಬಳಿಕ ಶರಣರನ್ನು ಜೈಲಿನಿಂದ ಬಿಡುಗಡೆ ಮಾಡಲಾಗಿತ್ತು. ಇದೀಗ ಪ್ರಕರಗಳ ವಿಚಾರಣೆಗೆ ತಡೆಯಾಜ್ಞೆ ನೀಡಿದೆ.

# ಚಾಮರಾಜನಗರ: ಚಿರತೆಯನ್ನು ಗುಂಡಿಕ್ಕಿ ಕೊಂದ ಆರೋಪದ ಮೇಲೆ ಇಬ್ಬರ ಬಂಧನ

ಚಾಮರಾಜನಗರ: ಚಿರತೆಯನ್ನು ಗುಂಡಿಕ್ಕಿ ಕೊಂದ ಆರೋಪದ ಮೇಲೆ ಇಬ್ಬರನ್ನು ಬಂಧಿಸಲಾಗಿದ್ದು, ಪೊಲೀಸರು ಚಿರತೆಯ ಅವಶೇಷಗಳನ್ನು ವಶಪಡಿಸಿಕೊಂಡಿದ್ದಾರೆ.

ಶಂಕಿತ ಆರೋಪಿಗಳಾದ ಶಾಂತರಾಜು ಮತ್ತು ಅರ್ಜುನ್ ಎಂಬುವವರಿಂದ ಎರಡು ಕಂಟ್ರಿ ಪಿಸ್ತೂಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಶನಿವಾರ ಬೆಳಗ್ಗೆ ಕೊಳ್ಳೇಗಾಲ ಗ್ರಾಮಾಂತರ ಠಾಣೆಯ ಪೊಲೀಸ್ ತಂಡವು ಆರೋಪಿಗಳನ್ನು ಬಂಧಿಸಿದೆ.

ಖಚಿತ ಮಾಹಿತಿ ಮೇರೆಗೆ ಚಿಕ್ಕಲ್ಲೂರು ಬಳಿ ದ್ವಿಚಕ್ರವಾಹನದಲ್ಲಿ ತೆರಳುತ್ತಿದ್ದ ಅವರನ್ನು



ಬಂಧಿಸಲಾಗಿದೆ. ಈ ವೇಳೆ ಪರಿಶೀಲಿಸಿದಾಗ ಅವರ ಬಳಿ ಎರಡು ದೇಶೀ ನಿರ್ಮಿತ ಪಿಸ್ತೂಲ್‌ಗಳು ಪತ್ತೆಯಾಗಿವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವಿಚಾರಣೆ ವೇಳೆ ಆರೋಪಿಗಳು ನಾಲ್ಕೈದು ದಿನಗಳ ಹಿಂದೆ ಚಿರತೆಯನ್ನು ಕೊಂದಿರುವುದಾಗಿ ಒಪ್ಪಿಕೊಂಡಿದ್ದು, ನಟರಾಜ್ ಎಂದು ಗುರುತಿಸಲಾಗಿರುವ ಮೂರನೇ ಸಹಚರನ ಕೈವಾಡವನ್ನು ಬಹಿರಂಗಪಡಿಸಿದ್ದಾರೆ ಎಂದು ಅವರು ಹೇಳಿದರು.

'ಕಾವೇರಿಪುರದ ಕಗ್ಗಲಿಪುರ ಅರಣ್ಯ ಪ್ರದೇಶದಲ್ಲಿ ಮೂವರು ಸೇರಿ ಚಿರತೆಯನ್ನು ಕೊಂದಿದ್ದಾರೆ ಮತ್ತು ಅದರ ಚರ್ಮವನ್ನು ತೆಗೆಯುತ್ತಿರುವಾಗ ಯಾರೋ ತಮ್ಮ ಕಡೆಗೆ ಬರುವ ಶಬ್ದ ಕೇಳಿ ಚಿರತೆಯ ಶವವನ್ನು ಬಿಟ್ಟು ಸ್ಥಳದಿಂದ ಓಡಿಹೋಗಿದ್ದಾರೆ' ಎಂದು ಅವರು ಹೇಳಿದರು.

ನಂತರ ಇಬ್ಬರು ಆರೋಪಿಗಳು ನೀಡಿದ ಮಾಹಿತಿ ಮೇರೆಗೆ ಕಗ್ಗಲಿಪುರ ಅರಣ್ಯ ಪ್ರದೇಶದಿಂದ ಪೊಲೀಸರು ಚಿರತೆಯ ಮೃತದೇಹವನ್ನು ವಶಪಡಿಸಿಕೊಂಡಿದ್ದಾರೆ. ಆರೋಪಿಗಳ ವಿರುದ್ಧ ಶಸ್ತ್ರಾಸ್ತ್ರ ಕಾಯ್ದೆ ಮತ್ತು ವನ್ಯಜೀವಿ ಸಂರಕ್ಷಣಾ ಕಾಯ್ದೆಯ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

'ಈ ಸಂಬಂಧ ನಾವು ಇಬ್ಬರನ್ನು ಬಂಧಿಸಿದ್ದೇವೆ ಮತ್ತು ಅವರಿಂದ ವಶಪಡಿಸಿಕೊಂಡ ಎರಡು ದೇಶೀ ನಿರ್ಮಿತ ಪಿಸ್ತೂಲ್‌ಗಳನ್ನು ವಶಪಡಿಸಿಕೊಂಡಿದ್ದೇವೆ. ಆಪಾದಿತ ಕೃತ್ಯದಲ್ಲಿ ಅವರೊಂದಿಗೆ ಭಾಗಿಯಾಗಿರುವ ಮೂರನೇ ಶಂಕಿತನನ್ನು ಬಂಧಿಸುವ ಪ್ರಯತ್ನಗಳು ನಡೆಯುತ್ತಿವೆ' ಎಂದು ಅವರು ಹೇಳಿದರು.

# ಜನ ಸಂಪರ್ಕ ಸಭೆ

ಶಿವಮೊಗ್ಗ: ಮೆಸ್ಕಾಂ ಕುಂಸಿ ಉಪವಿಭಾಗ ಕಚೇರಿಯಲ್ಲಿ ನ.28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ಜನ ಸಂಪರ್ಕ ಸಭೆ ನಡೆಯಲಿದ್ದು ಮೆಸ್ಕಾಂ ಅಧಿಕಾರಿ ಭಾಗವಹಿಸುವರು. ಸಂಬಂಧಪಟ್ಟ ಪ್ರದೇಶದ ಗ್ರಾಹಕರು ತಮ್ಮ ಅಹವಾಲುಗಳನ್ನು ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ ಸಂ: 9480841340 ನ್ನು ಸಂಪರ್ಕಿಸಬಹುದೆಂದು ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಸಾರ್ವಜನಿಕ ಪ್ರಕಟಣೆ

ಬೆಳಗಾವಿ: ಕೆಯುಐಡಿಎಫ್‌ಸಿ ಹಾಗೂ ಮಹಾನಗರ ಪಾಲಿಕೆ, ಮೂಲಕ ಸಾರ್ವಜನಿಕರಲ್ಲಿ ವಿನಂತಿಸುವುದೇನೆಂದರೆ, ಹೊಸ ನಳ ಸಂಪರ್ಕ ಬೇಕಾಗಿದಲ್ಲಿ ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸತಕ್ಕದು.

ಆನ್‌ಲೈನ್ ವಿಳಾಸ: www. mrc.gov.in ಗೆ ಭೇಟಿ ನೀಡಿ ಅದರಲ್ಲಿ ಇಟಝ ನಲ್ಲಿ ನಾಗರಿಕ ಆನ್‌ಲೈನ್ ಸೇವೆಗಳು ಅದರಲ್ಲಿ ನೀರಿನ ಸಂಪರ್ಕಕ್ಕೆ ಅರ್ಜಿ ಎಂಬುವುದರಲ್ಲಿ ತಮ್ಮ ದಾಖಲಾತಿಗಳನ್ನು Upload ಮಾಡಬಹುದಾಗಿದೆ.

ಗ್ರಾಹಕರು ಪ್ಲಂಬರ್/ಮಧ್ಯವರ್ತಿಗಳ ಮುಖಾಂತರ ಅರ್ಜಿ ಸಲ್ಲಿಸುವಂತಿಲ್ಲ. ಒಂದು ವೇಳೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು ತೊಂದರೆಯಾದಲ್ಲಿ, ಅಧೀಕ್ಷಕ ಅಭಿಯಂತರರು, ಕೆಯುಐಡಿಎಫ್‌ಸಿ–ಕುಸ್ಸೆಂಪ್, ಯೋಜನಾ ಅನುಷ್ಠಾನ ಘಟಕ, ಸ್ಮಾರ್ಟ ಸಿಟಿ, ಕಮಾಂಡ್ ಕಂಟ್ರೋಲ್ ಸೆಂಟರ್, ನೆಲಮಹಡಿ ವಿಶ್ವೇಶ್ವರಯ್ಯ ನಗರ ಬೆಳಗಾವಿ, ಇವರನ್ನು ಸಂಪರ್ಕಿಸಲು ಮಾನ್ಯ ಆಯುಕ್ತರು, ಬೆಳಗಾವಿ ಮಹಾನಗರ ಪಾಲಿಕೆ, ಪರವಾಗಿ ಕೋರಲಾಗಿದೆ.

ಸಂಪುಟ: 4 ಸಂಚಿಕೆ: 245 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089